ಸಂಪುಟ: 11 ಸಂಚಿಕೆ: 209 ಪುಟಗಳು: 4+2 ಬೆಲೆ: ₹ 3.00 ಗುರುವಾರ, ಸೆಪ್ಟೆಂಬರ್ 24, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 209 Pages : 4+2 Rate : 3.00 Thursday, September 24, 2026 Gadag RNI No : KARKAN/2015/63412 E-mail: vijayasakshidaily@gmail.com Post Regn.No: GDG/72/2020-22

## ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಎಚ್ಚರ ವಹಿಸಿ; ವಿಪುಲ್ ಬನ್ಸಲ್

# ಅರ್ಹರ ಹೆಸರು ತಪ್ಪಿದರೆ ಅಧಿಕಾರಿಗಳೇ ಹೊಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಅರ್ಹ ಪ್ರತಿಯೊಬ್ಬ ನಾಗರಿಕನೂ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವುದು ಪ್ರಜಾಪ್ರಭುತ್ವದ ಮೂಲ ಆಶಯ. ಹೀಗಾಗಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವನ್ನು ಅತ್ಯಂತ ನಿಖರವಾಗಿ, ಪಾರದರ್ಶಕವಾಗಿ ಹಾಗೂ ನಿಯಮಾನುಸಾರ ಕೈಗೊಳ್ಳಬೇಕು ಎಂದು ವಾಣಿಜ್ಯ ತೆರಿಗೆಗಳ ಇಲಾಖೆ ಆಯುಕ್ತರು ಹಾಗೂ ಗದಗ ಜಿಲ್ಲಾ ಮತದಾರರ ಪಟ್ಟಿಯ ವೀಕ್ಷಕರಾದ ವಿಪುಲ್ ಬನ್ಸಲ್ ಅಧಿಕಾರಿಗಳಿಗೆ ಸೂಚಿಸಿದರು.



ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಬುಧವಾರ ನಡೆದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ–2026ರ ಪ್ರಗತಿ ಪರಿಶೀಲನಾ ಸಭೆ ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

18 ವರ್ಷ ಪೂರ್ಣಗೊಂಡ ಯುವಕ–ಯುವತಿಯರು ಹಾಗೂ ಇದುವರೆಗೆ ಮತದಾರರ ಪಟ್ಟಿಗೆ ಸೇರ್ಪಡೆಯಾಗದ ಅರ್ಹ ನಾಗರಿಕರನ್ನು ಗುರುತಿಸಿ ಆದ್ಯತೆಯ ಮೇರೆಗೆ ನೋಂದಾಯಿಸಲು ಕ್ರಮ ಕೈಗೊಳ್ಳಬೇಕು. ಮತದಾರರ ಪಟ್ಟಿಯಲ್ಲಿರುವ ಹೆಸರು, ವಿಳಾಸ, ಭಾವಚಿತ್ರ ಸೇರಿದಂತೆ ಇತರೆ ವಿವರಗಳಲ್ಲಿ ದೋಷಗಳಿದ್ದರೆ ನಮೂನೆ–8ರ ಮೂಲಕ ತ್ವರಿತವಾಗಿ ಪರಿಶೀಲಿಸಿ ತಿದ್ದುಪಡಿ ಮಾಡಬೇಕು. ಮೃತಪಟ್ಟ ಅಥವಾ ಸ್ಥಳಾಂತರಗೊಂಡ ಮತದಾರರ ಹೆಸರುಗಳನ್ನು ನಮೂನೆ–7ರ ನಿಯಮಾನುಸಾರ ತೆಗೆದುಹಾಕಬೇಕು ಎಂದು ಸೂಚಿಸಿದರು.

ಮನೆ–ಮನೆಗೆ ಭೇಟಿ ನೀಡಿ ಪರಿಶೀಲನೆ ನಡೆಸುವ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ವಿಶೇಷ ಗಮನಹರಿಸಬೇಕು ಎಂದು ವಿಪುಲ್ ಬನ್ಸಲ್ ಹೇಳಿದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಮಾತನಾಡಿ, ಗದಗ ಜಿಲ್ಲೆಯಲ್ಲಿ ಒಟ್ಟು 122 ಗ್ರಾಮ ಪಂಚಾಯಿತಿಗಳಿದ್ದು, ಶಿರಹಟ್ಟಿ–65, ಗದಗ–66, ರೋಣ–67 ಹಾಗೂ ನರಗುಂದ–68 ವಿಧಾನಸಭಾ ಮತಕ್ಷೇತ್ರಗಳಿವೆ. ಜಿಲ್ಲೆಯಲ್ಲಿ 353 ಗ್ರಾಮಗಳು ಹಾಗೂ 203 ವಾರ್ಡ್‌ಗಳಿವೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಒಟ್ಟು 983 ಮತಗಟ್ಟೆಗಳಿದ್ದು, 983 ಬಿಎಲ್‌ಒಗಳು ಹಾಗೂ 97 ಬಿಎಲ್‌ಒ ಮೇಲ್ವಿಚಾರಕರು ಕಾರ್ಯನಿರ್ವಹಿಸುತ್ತಿದ್ದಾರೆ. ರಾಜಕೀಯ ಪಕ್ಷಗಳ ವತಿಯಿಂದ ಐಎನ್‌ಸಿ 967, ಬಿಜೆಪಿ 967, ಜೆಡಿ–ಎಸ್ 62 ಹಾಗೂ ಸಿಪಿಐಎಂ 30 ಬೂತ್ ಮಟ್ಟದ ಏಜೆಂಟ್‌ಗಳನ್ನು (ಬಿಎಲ್‌ಎ) ನೇಮಿಸಲಾಗಿದೆ ಎಂದು ತಿಳಿಸಿದರು.

> ಅರ್ಹ ಪ್ರತಿಯೊಬ್ಬ ನಾಗರಿಕನೂ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಬೇಕು. ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು.
> – ವಿಪುಲ್ ಬನ್ಸಲ್, ಜಿಲ್ಲಾ ಮತದಾರರ ಪಟ್ಟಿಯ ವೀಕ್ಷಕರು

ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮುಕುಲ್ ಜೈನ್ ಮಾತನಾಡಿ, ಜಿಲ್ಲೆಯಲ್ಲಿ ಇದುವರೆಗೆ ಒಟ್ಟು 9,02,947 ಮತದಾರರು ಇದ್ದು, ಈ ಪೈಕಿ 7,82,232 ಮತದಾರರ ಎನುಮರೇಷನ್ ಫಾರ್ಮ್‌ಗಳು ಡಿಜಿಟಲೀಕರಣಗೊಂಡಿವೆ. ಇದು ಶೇ.86.63ರಷ್ಟು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿ ಡಾ. ದುರ್ಗೇಶ್ ಕೆ.ಆರ್. ಮಾತನಾಡಿ, ವಿಶೇಷ ಸಮಗ್ರ ಪರಿಷ್ಕರಣೆ ಅಭಿಯಾನದಲ್ಲಿ ಜಿಲ್ಲೆಯಲ್ಲಿ 4,135 ಯುವ ಮತದಾರರು ನೋಂದಾಯಿಸಿಕೊಂಡಿದ್ದಾರೆ. ಇವರಲ್ಲಿ 2,232 ಪುರುಷರು ಹಾಗೂ 1,903 ಮಹಿಳೆಯರಿದ್ದಾರೆ. ಅಭಿಯಾನದಡಿ ಇದುವರೆಗೆ ಒಟ್ಟು 8,166 ಹೊಸ ಮತದಾರರು ಅರ್ಜಿ ಸಲ್ಲಿಸಿದ್ದಾರೆ ಎಂದು ಮಾಹಿತಿ ನೀಡಿದರು.

ಸಭೆಯಲ್ಲಿ ಎಸಿ ಗಂಗಪ್ಪ ಎಂ., ಜಿಪಂ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ತಹಶೀಲ್ದಾರ ಶ್ರೀನಿವಾಸ ಮೂರ್ತಿ, ಆಹಾರ ಇಲಾಖೆಯ ಉಪನಿರ್ದೇಶಕ ಎಂ.ಎಸ್. ಪಾಟೀಲ್, ಚುನಾವಣಾ ಶಾಖೆಯ ತಹಶೀಲ್ದಾರ ಸಂತೋಷ ಹಿರೇಮಠ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೊಟೂರು, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ಡಾ. ನಂದಾ ಹಣಬರಹಟ್ಟಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಎಂ.ಎಂ. ತುಂಬರಮಟ್ಟಿ, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

## ನಾಳೆ ಬಾಗೇವಾಡಿ, ಬೆಳ್ಳಟ್ಟಿ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

**ವಿಜಯಸಾಕ್ಷಿ ಸುದ್ದಿ, ಗದಗ**

110 ಕೆ.ವಿ. ಬಾಗೇವಾಡಿ ಹಾಗೂ 110 ಕೆ.ವಿ. ಬೆಳ್ಳಟ್ಟಿ ವಿದ್ಯುತ್ ವಿತರಣಾ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳಲಾಗುತ್ತಿರುವ ಹಿನ್ನೆಲೆಯಲ್ಲಿ ಸೆ. 25ರಂದು ಬೆಳಗ್ಗೆ 10ರಿಂದ ಸಂಜೆ 5.30ರವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಬಾಗೇವಾಡಿ ಹಾಗೂ ಬೆಳ್ಳಟ್ಟಿ ಉಪಕೇಂದ್ರಗಳಿಂದ ಪೂರೈಕೆಯಾಗುವ 110 ಕೆ.ವಿ. ಎನಾರಕಾನ, 110 ಕೆ.ವಿ. ಆದಿತ್ಯ ಬಿರ್ಲಾ ಸೋಲಾರ್, 33 ಕೆ.ವಿ. ಜಾಲವಾಡಗಿ ನೀರು ಸರಬ ರಾಜು, 33 ಕೆ.ವಿ. ಸೂರಣಗಿ ಹಾಗೂ 33 ಕೆ.ವಿ. ಹೊಳೆಇಟಗಿ ಉಪಕೇಂದ್ರಗಳ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಇದರೊಂದಿಗೆ 110 ಕೆ.ವಿ. ಬಾಗೇವಾಡಿ ಉಪಕೇಂದ್ರದ ವ್ಯಾಪ್ತಿಗೆ ಒಳಪಡುವ ಸೋಲಾರ್ ಹಾಗೂ ಎನ್.ಜೆ.ವೈ.ಗಳಿಂದ ಪೂರೈಕೆಯಾಗುವ ನಗರ ಮತ್ತು ಗ್ರಾಮೀಣ ಪ್ರದೇಶಗಳ ಎಲ್ಲ 11 ಕೆ.ವಿ. ವಿದ್ಯುತ್ ವಿತರಣಾ ಮಾರ್ಗಗಳಲ್ಲಿಯೂ ಪೂರೈಕೆ ಸ್ಥಗಿತಗೊಳ್ಳಲಿದೆ. ನಿರ್ವಹಣಾ ಕಾಮಗಾರಿ ಹಿನ್ನೆಲೆಯಲ್ಲಿ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸಿ, ನಿಗದಿತ ಅವಧಿಯಲ್ಲಿ ವಿದ್ಯುತ್ ಆಧಾರಿತ ಕಾರ್ಯಗಳನ್ನು ಯೋಜಿಸಿಕೊಳ್ಳುವಂತೆ ಹಾಗೂ ಕಂಪನಿಯೊಂದಿಗೆ ಸಹಕರಿಸುವಂತೆ ಹೆಸ್ಕಾಂ ಅಧಿಕಾರಿಗಳು ಮನವಿ ಮಾಡಿದ್ದಾರೆ.

## ಡಿಪ್ಲೋಮಾ ವಿದ್ಯಾರ್ಥಿಗಳಿಗೆ ಮತ್ತೊಂದು ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಸಿ–09 ಮತ್ತು ಸಿ–15 ಪಠ್ಯಕ್ರಮದಡಿ ಪ್ರವೇಶ ಪಡೆದು ಪ್ರಸ್ತುತ ಬಾಕಿ ವಿಷಯಗಳನ್ನು ಹೊಂದಿರುವ ವಿದ್ಯಾರ್ಥಿಗಳಿಗೆ ಏಪ್ರಿಲ್/ಮೇ–2028ರ ಸೆಮಿಸ್ಟರ್ ಪರೀಕ್ಷೆಯವರೆಗೆ ಡಿಪ್ಲೋಮಾ ವ್ಯಾಸಂಗ ಪೂರ್ಣಗೊಳಿಸಲು ಸರ್ಕಾರದ ಆದೇಶದಂತೆ ಅವಕಾಶ ಕಲ್ಪಿಸಲಾಗಿದೆ. ಈ ಹಿನ್ನೆಲೆಯಲ್ಲಿ ನವೆಂಬರ್/ಡಿಸೆಂಬರ್–2026ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ದಂಡರಹಿತವಾಗಿ ನೋಂದಾಯಿಸಿಕೊಳ್ಳಲು ಅವಕಾಶವಿದ್ದು, ಸಂಬಂಧಿಸಿದ ವಿದ್ಯಾರ್ಥಿಗಳು ಅಕ್ಟೋಬರ್ 5ರಂದು ಸಂಜೆ 5.30ರೊಳಗಾಗಿ ಅಗತ್ಯ ದಾಖಲೆಗಳನ್ನು ಸಲ್ಲಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು ಎಂದು ಗದಗ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಸರ್ಕಾರ ನೀಡಿರುವ ಈ ಅವಕಾಶವನ್ನು ಅರ್ಹ ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಳ್ಳುವಂತೆ ಅವರು ಮನವಿ ಮಾಡಿದ್ದಾರೆ.

## ಸೆ.26ಕ್ಕೆ ವಿದ್ಯಾರ್ಥಿಗಳ 'ಸೇವಾ ಸಂಕಲ್ಪ' ಸ್ಪರ್ಧೆ!

**ವಿಜಯಸಾಕ್ಷಿ ಸುದ್ದಿ, ಗದಗ**

ಸೇವಾ ಸಂಕಲ್ಪ ಅಭಿಯಾನ–2026 ರ ಅಂಗವಾಗಿ ಶಾಲಾ ವಿದ್ಯಾರ್ಥಿಗಳಿಗಾಗಿ ಸೆ.26ರಂದು ಗದಗದಲ್ಲಿ ಬೃಹತ್ ಚಿತ್ರಕಲೆ ಹಾಗೂ ಭಾಷಣ ಸ್ಪರ್ಧೆ ಆಯೋಜಿಸಲಾಗಿದೆ ಎಂದು ಅಭಿಯಾನದ ಜಿಲ್ಲಾ ಸಂಚಾಲಕ ಸಂತೋಷ ಅಕ್ಕಿ ತಿಳಿಸಿದ್ದಾರೆ. ಸೆ.26ರಂದು ಬೆಳಗ್ಗೆ 8.30ಕ್ಕೆ ಹಾತಲಗೇರಿ ನಾಕಾದ ಸಾಯಿ ಬಾಬಾ ದೇವಸ್ಥಾನದ ಹಿಂಭಾಗದ ವಿಜಯ ಲಲಿತ ಕಲಾ ಸಂಸ್ಥೆ ಆವರಣದಲ್ಲಿ ಕಾರ್ಯಕ್ರಮ ನಡೆಯಲಿದೆ. '2047ರ ವಿಕಸಿತ ಭಾರತ' ವಿಷಯದ ಭಾಷಣ ಸ್ಪರ್ಧೆ ವಿಜಯ ಪಿ.ಯು. ವಾಣಿಜ್ಯ ಕಾಲೇಜಿನಲ್ಲಿ ನಡೆಯಲಿದೆ. 1ರಿಂದ 7ನೇ ತರಗತಿ ವಿದ್ಯಾರ್ಥಿಗಳಿಗೆ ಚಿತ್ರ ಕಲಾ ಸ್ಪರ್ಧೆ ವಿಜಯ ಲಲಿತ ಕಲಾ ಕಾಲೇಜಿನಲ್ಲಿ ನಡೆಯಲಿದ್ದು, ಭಾಗ ವಹಿಸುವಂತೆ ಮನವಿ ಮಾಡಿದ್ದಾರೆ.

### ಸೆ.29ಕ್ಕೆ ಅಧಿಸೂಚನೆ, ಅ.23ಕ್ಕೆ ಮತದಾನ; ಅ.27ರಂದು ಫಲಿತಾಂಶದ ದಿನ

## ಪಶ್ಚಿಮ ಪದವೀಧರ ಕ್ಷೇತ್ರಕ್ಕೆ ಚುನಾವಣೆ ಘೋಷಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಚುನಾವಣೆ–2026ಕ್ಕೆ ಚುನಾವಣಾ ವೇಳಾಪಟ್ಟಿ ಪ್ರಕಟವಾಗಿದ್ದು, ಸೆಪ್ಟೆಂಬರ್ 29ರಂದು ಚುನಾವಣಾ ಅಧಿಸೂಚನೆ ಹೊರಬೀಳಲಿದೆ. ಅಕ್ಟೋಬರ್ 23ರಂದು ಮತದಾನ ನಡೆಯಲಿದ್ದು, ಅಕ್ಟೋಬರ್ 27ರಂದು ಮತಗಳ ಎಣಿಕೆ ನಡೆಯಲಿದೆ ಎಂದು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಕರ್ನಾಟಕ ಪಶ್ಚಿಮ ಪದವೀಧರ ಮತಕ್ಷೇತ್ರದ ಚುನಾವಣಾಧಿಕಾರಿ ಕೆ.ಎಂ. ಜಾನಕಿ ತಿಳಿಸಿದ್ದಾರೆ. ಚುನಾವಣಾ ವೇಳಾಪಟ್ಟಿಯ ಪ್ರಕಾರ ಸೆ.29ರಂದು ಅಧಿಸೂಚನೆ ಪ್ರಕಟವಾದ ಬಳಿಕ ಅಕ್ಟೋಬರ್ 6ರಂದು ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿರುತ್ತದೆ. ಅಕ್ಟೋಬರ್ 7ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಅಕ್ಟೋಬರ್ 9ರಂದು ಉಮೇದುವಾರಿಕೆಯನ್ನು ಹಿಂಪಡೆಯಲು ಕೊನೆಯ ಅವಕಾಶವಿರಲಿದೆ.



ಅಕ್ಟೋಬರ್ 23ರಂದು ಬೆಳಿಗ್ಗೆ 8ರಿಂದ ಸಂಜೆ 4ರವರೆಗೆ ಮತದಾನ ನಡೆಯಲಿದೆ. ಬಳಿಕ ಅಕ್ಟೋಬರ್ 27ರಂದು ಮತಗಳ ಎಣಿಕೆ ನಡೆಯಲಿದ್ದು, ಅಕ್ಟೋಬರ್ 31ರಂದು ಸಂಪೂರ್ಣ ಚುನಾವಣಾ ಪ್ರಕ್ರಿಯೆ ಪೂರ್ಣಗೊಳ್ಳಲಿದೆ.

**ಅಧಿಕಾರಿಗಳಿಗೆ ಸಿದ್ಧತೆಗೆ ಸೂಚನೆ**

ಚುನಾವಣಾ ಪ್ರಕ್ರಿಯೆಯನ್ನು ಸುಗಮವಾಗಿ, ಶಾಂತಿಯುತವಾಗಿ ಹಾಗೂ ನಿಯಮಾನುಸಾರ ನಡೆಸಲು ಸಂಬಂಧಿಸಿದ ಸಹಾಯಕ ಚುನಾವಣಾಧಿಕಾರಿಗಳು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ. ಚುನಾವಣಾ ವ್ಯಾಪ್ತಿಯ ಜಿಲ್ಲೆಗಳಲ್ಲಿ ಚುನಾವಣಾ ನೀತಿ ಸಂಹಿತೆ ಸೇರಿದಂತೆ ಭಾರತ ಚುನಾವಣಾ ಆಯೋಗದ ಎಲ್ಲ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಚುನಾವಣಾ ಸಂದರ್ಭದಲ್ಲಿ ಯಾವುದೇ ರೀತಿಯ ಅಹಿತಕರ ಘಟನೆಗಳಿಗೆ ಅವಕಾಶವಾಗದಂತೆ ಪೊಲೀಸ್ ಇಲಾಖೆ ಹಾಗೂ ಇತರೆ ಸಂಬಂಧಿತ ಇಲಾಖೆಗಳು ಅಗತ್ಯ ಕ್ರಮಗಳನ್ನು ಕೈಗೊಂಡು ಚುನಾವಣಾ ಪ್ರಕ್ರಿಯೆಗೆ ಸಹಕಾರ ನೀಡುವಂತೆ ತಿಳಿಸಲಾಗಿದೆ ಎಂದು ಚುನಾವಣಾಧಿಕಾರಿ ಕೆ.ಎಂ. ಜಾನಕಿ ತಿಳಿಸಿದ್ದಾರೆ.




**ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪೂರ್ವ ಮುಂಗಾರು ಸಂಪೂರ್ಣ ಕೈಕೊಟ್ಟ ಪರಿಣಾಮ ಮುಂಗಾರು ಬೆಳೆಗಳಿಲ್ಲದೆ ಆತಂಕದಲ್ಲಿದ್ದ ರೈತರ ಮೊಗದಲ್ಲಿ ಬುಧವಾರ ಸುರಿದ ಉತ್ತರಿ ಮಳೆ ಸಂತಸ ಮೂಡಿಸಿದೆ. ಮಳೆಯ ನಿರೀಕ್ಷೆಯಲ್ಲಿ ಕಾದಿದ್ದ ರೈತರಿಗೆ ಮಧ್ಯಾಹ್ನ ಸುರಿದ ಮಳೆ ಕೊಂಚ ನೆಮ್ಮದಿ ತಂದಿದೆ.

ಮುಂಗಾರು ಕೈಕೊಟ್ಟಿದ್ದರಿಂದ ಹಲವು ಜಮೀನುಗಳು ಒಣಗಿ, ಬಿತ್ತನೆ ಕಾರ್ಯವೂ ನಿರೀಕ್ಷಿತ ಪ್ರಮಾಣದಲ್ಲಿ ನಡೆದಿರಲಿಲ್ಲ. ಹಿಂಗಾರು ಮಳೆಯನ್ನೇ ಆಶ್ರಯಿಸಿದ್ದ ರೈತರು ನಿತ್ಯ ಆಕಾಶದತ್ತ ಮುಖ ಮಾಡಿ ಕಾಯುತ್ತಿದ್ದರು. ಈ ನಡುವೆ ಬುಧವಾರ ಮಧ್ಯಾಹ್ನ ಸುರಿದ ಮಳೆ ಜಮೀನುಗಳಿಗೆ ತೇವಾಂಶ ನೀಡಿದ್ದು, ರೈತರಲ್ಲಿ ಹಿಂಗಾರು ಬೆಳೆ ಬಿತ್ತನೆಯ ಆಶಾಭಾವ ಮೂಡಿಸಿದೆ.

ಮುಳಗುಂದ ಪಟ್ಟಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೆಲಕಾಲ ಮಳೆ ಸುರಿಯಿತು. ಮಳೆಯಿಂದ ಒಣಗಿದ್ದ ಕೃಷಿ ಜಮೀನುಗಳಲ್ಲಿ ತೇವಾಂಶ ಕಾಣಿಸಿಕೊಂಡಿದ್ದು, ಮುಂದಿನ ದಿನಗಳಲ್ಲಿಯೂ ಉತ್ತಮ ಮಳೆಯಾದರೆ ಹಿಂಗಾರು ಬಿತ್ತನೆಗೆ ಅನುಕೂಲವಾಗಲಿದೆ ಎಂಬ ನಿರೀಕ್ಷೆ ರೈತರಲ್ಲಿದೆ.

ಸತತ ಮಳೆ ಕೊರತೆಯಿಂದ ಬೆಳೆ ಹಾಗೂ ಕೃಷಿ ಚಟುವಟಿಕೆಗಳ ಬಗ್ಗೆ ಆತಂಕದಲ್ಲಿದ್ದ ರೈತರಿಗೆ ಉತ್ತರಿ ಮಳೆ ಹೊಸ ನಿರೀಕ್ಷೆ ಮೂಡಿಸಿದೆ. ಆದರೆ ಹಿಂಗಾರು ಬೆಳೆಗಳ ಬಿತ್ತನೆಗೆ ಅಗತ್ಯ ಪ್ರಮಾಣದ ಮಳೆ ಮುಂದುವರಿಯಬೇಕಿದೆ ಎಂಬುದು ರೈತರ ಆಶಯವಾಗಿದೆ.

## ವಿಕಲಚೇತನರ 14 ಯೋಜನೆಗಳಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ 14 ಫಲಾನುಭವಿ ಆಧಾರಿತ ಯೋಜನೆಗಳಿಗೆ 2026–27ನೇ ಸಾಲಿನಲ್ಲಿ ಅರ್ಜಿ ಆಹ್ವಾನಿಸಲಾಗಿದೆ. ಸೆ.22ರಿಂದ ಅರ್ಜಿ ಸಲ್ಲಿಕೆ ಆರಂಭವಾಗಿದ್ದು, ಅಕ್ಟೋಬರ್ 30 ಅರ್ಜಿ ಸಲ್ಲಿಸಲು ಕೊನೆಯ ದಿನ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಹಾಗೂ ಇಲಾಖೆಯ ಅಧಿಕಾರಿ ಶ್ರೀದೇವಿ ಎಸ್.ಎನ್. ತಿಳಿಸಿದ್ದಾರೆ. ಸೇವಾಸಿಂಧು ಡಿಬಿಟಿ (ನೇರ ನಗದು ವರ್ಗಾವಣೆ) ಆನ್‌ಲೈನ್ ವೇದಿಕೆಯಡಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಫಲಾನುಭವಿಗಳು ಗ್ರಾಮ ಒನ್, ಕರ್ನಾಟಕ ಒನ್ ಕೇಂದ್ರಗಳ ಮೂಲಕ ಅಥವಾ ನೇರವಾಗಿ ಅರ್ಜಿ ಸಲ್ಲಿಸಬಹುದು.

ಅರ್ಜಿ ಸಲ್ಲಿಸಬಹುದಾದ ಪ್ರಮುಖ ಯೋಜನೆಗಳಲ್ಲಿ ಆಧಾರ ಯೋಜನೆ, ವೈದ್ಯಕೀಯ ಪರಿಹಾರ ನಿಧಿ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ, ನಿರುದ್ಯೋಗ ಭತ್ಯೆ, ಶಿಶುಪಾಲನಾ ಭತ್ಯೆ, ಮರಣ ಪರಿಹಾರ ನಿಧಿ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ಬ್ರೈಲ್ ಕಿಟ್, ಯಂತ್ರಚಾಲಿತ ದ್ವಿಚಕ್ರ ವಾಹನ, ಹೊಲಿಗೆ ಯಂತ್ರ, ಸಾಧನ–ಸಲಕರಣೆ, ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ಹಾಗೂ ಸಾಧನ ಯೋಜನೆ ಸೇರಿವೆ. ಆನ್‌ಲೈನ್ ಅರ್ಜಿಗಳನ್ನು sevaone.karnataka.gov.in ಪೋರ್ಟಲ್ ಮೂಲಕ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ತಾಲ್ಲೂಕಿನ ಎಂ.ಆರ್.ಡಬ್ಲ್ಯೂ ಖಾಜಾಹುಸೇನ ಕಾತರಕಿ (8867556465), ರೋಣದ ಬಸವರಾಜ ಓಲಿ (9741615926), ಮುಂಡರಗಿಯ ಶಶಿಕಲಾ ವಡ್ಡಟ್ಟಿ (9611922445), ಶಿರಹಟ್ಟಿಯ ಭಾರತಿ ಮುರಶಿಳ್ಳಿ (8951128679) ಹಾಗೂ ನರಗುಂದದ ಶಿವಾನಂದ ಹಾದಿಮನಿ (9591679022) ಅವರನ್ನು ಸಂಪರ್ಕಿಸಬಹುದು.

ಇದಲ್ಲದೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ 029, ಗದಗ – 08372–220419ಕ್ಕೆ ಸಂಪರ್ಕಿಸಬಹುದು.

### ಪಾರಂಪರಿಕ ವೈದ್ಯಕೀಯ ಜ್ಞಾನವನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯೋಣ

## ಆಯುರ್ವೇದಕ್ಕೆ ಸಂಶೋಧನೆಯ ಬಲ ಬೇಕು

**ವಿಜಯಸಾಕ್ಷಿ ಸುದ್ದಿ, ಗದಗ**

ಆಯುರ್ವೇದದ ಮೂಲ ತತ್ವಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ನಿರಂತರ ಸಂಶೋಧನೆಗೆ ಒತ್ತು ನೀಡಿದಾಗ ಮಾತ್ರ ಭಾರತದ ಸಾಂಪ್ರದಾಯಿಕ ವೈದ್ಯಕೀಯ ಜ್ಞಾನ ಮತ್ತು ಆಯುರ್ವೇದ ಕ್ಷೇತ್ರ ಮತ್ತಷ್ಟು ಬೆಳೆಯಲು ಸಾಧ್ಯ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್ ಹೇಳಿದರು.

ಜಿಲ್ಲಾಡಳಿತ, ಜಿಪಂ ಹಾಗೂ ಜಿಲ್ಲಾ ಆಯುಷ್ ಇಲಾಖೆಯ ಸಹಯೋಗದಲ್ಲಿ ಜಿಲ್ಲಾಡಳಿತ ಭವನದ ಆಡಿಟೋರಿಯಂನಲ್ಲಿ ಧನ್ವಂತರಿ ಜಯಂತಿ ಅಂಗವಾಗಿ ನಡೆದ 11ನೇ ಆಯುರ್ವೇದ ದಿನಾಚರಣೆ, ಉಪನ್ಯಾಸ ಮಾಲಿಕೆ ಹಾಗೂ ವಸ್ತು ಪ್ರದರ್ಶನ ಉದ್ಘಾಟಿಸಿ ಅವರು ಮಾತನಾಡಿದರು.

ಭಾರತವು ಆಯುರ್ವೇದ ಹಾಗೂ ವೈದ್ಯಕೀಯ ವಿಜ್ಞಾನದಲ್ಲಿ ಸುದೀರ್ಘ ಹಾಗೂ ಶ್ರೀಮಂತ ಪರಂಪರೆ ಹೊಂದಿದೆ. ಧನ್ವಂತರಿ, ಸುಶ್ರುತ ಹಾಗೂ ಚರಕರಂತಹ ಮಹನೀಯರ ಕೊಡುಗೆಗಳು ಇದಕ್ಕೆ ಸಾಕ್ಷಿಯಾಗಿವೆ.

ಆಧುನಿಕ ವೈದ್ಯಕೀಯ ಕ್ಷೇತ್ರದಲ್ಲಿ ನಿರಂತರ ಹೊಸ ಸಂಶೋಧನೆಗಳು ನಡೆಯುತ್ತಿರುವಂತೆ, ಆಯುರ್ವೇದ ಕ್ಷೇತ್ರದಲ್ಲೂ ವೈಜ್ಞಾನಿಕ ಸಂಶೋಧನೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಹೇಳಿದರು.



ಜಿಲ್ಲಾ ಆಯುಷ್ ಅಧಿಕಾರಿ ಡಾ. ಜುಬೇದಾ ತಿಗಳೆರಿ ಮಾತನಾಡಿ, ಆಯುರ್ವೇದವು ಆರೋಗ್ಯಕರ ಜೀವನಶೈಲಿಗೆ ಒತ್ತು ನೀಡುತ್ತದೆ.

ಸಮತೋಲಿತ ಆಹಾರ, ಸೂಕ್ತ ಆಹಾರ–ವಿಹಾರ ಹಾಗೂ ಸಾತ್ವಿಕ ಆಹಾರ ಸೇವನೆಯ ಮೂಲಕ ಆರೋಗ್ಯ ಕಾಪಾಡಿಕೊಳ್ಳಬಹುದು. ವೇಗದ ಜೀವನಶೈಲಿಯಲ್ಲಿ ಮಾನಸಿಕ ಸ್ವಾಸ್ಥ್ಯಕ್ಕೂ ಆದ್ಯತೆ ನೀಡಬೇಕು ಎಂದರು.

ಆಯುರ್ವೇದ ಬೋಧಿಸುವ ಆರೋಗ್ಯಕರ ಜೀವನ ಪದ್ಧತಿಯನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಅವರು ಹೇಳಿದರು.

> ಆಯುರ್ವೇದದ ಸಾಂಪ್ರದಾಯಿಕ ಜ್ಞಾನವನ್ನು ಉಳಿಸುವುದರ ಜೊತೆಗೆ ನಿರಂತರ ಸಂಶೋಧನೆಗೆ ಒತ್ತು ನೀಡಿದಾಗ ಮಾತ್ರ ಈ ಕ್ಷೇತ್ರ ಮತ್ತಷ್ಟು ಬೆಳೆಯಲು ಸಾಧ್ಯ.
> – ಮುಕುಲ್ ಜೈನ್, ಜಿಪಂ ಸಿಇಒ


ಕಾರ್ಯಕ್ರಮದಲ್ಲಿ ಡಾ. ಸಂಜೀವ ನರಪ್ಪನವರ, ಡಾ. ಎಂ.ಎ. ಹದಿಮನಿ, ಡಾ. ಸಾಯಿ ಪ್ರಕಾಶ ಮಡಿವಾಳರ, ಸಹಾಯಕ ಆಡಳಿತಾಧಿಕಾರಿ ಸುಧಾ ಜಾಳಿಹಾಳ, ಡಾ. ಪವನ್, ಡಾ. ಆನಂದ ಕರಿಯವರ್ ಸೇರಿದಂತೆ ಆಯುಷ್ ಇಲಾಖೆಯ ಅಧಿಕಾರಿಗಳು ಹಾಗೂ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸಚಿವ ಶಿವಲಿಂಗೇಗೌಡ ರಾಜೀನಾಮೆಗೆ ರಾಜು ಕುರುಡಗಿ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಗದಗ**

ಸಕಲೇಶಪುರದಲ್ಲಿ ನಡೆದ ಪ್ರಜಾಸೇವಾ ಆಂದೋಲನದ ಸಾರ್ವಜನಿಕ ಕುಂದುಕೊರತೆ ಸಭೆಯಲ್ಲಿ ಲಂಚದ ಕುರಿತು ಸಚಿವ ಕೆ.ಎಂ. ಶಿವಲಿಂಗೇಗೌಡ ನೀಡಿರುವ ಹೇಳಿಕೆಯನ್ನು ಖಂಡಿಸಿರುವ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ, ಸಚಿವರ ರಾಜೀನಾಮೆ ಪಡೆಯಬೇಕು ಎಂದು ಆಗ್ರಹಿಸಿದ್ದಾರೆ.

ಸರ್ಕಾರಿ ಅಧಿಕಾರಿಗಳಿಗೆ ಲಂಚ ನೀಡುವಂತೆ ಪ್ರೇರೇಪಿಸುವ ರೀತಿಯಲ್ಲಿ ಸಚಿವರು ಮಾತನಾಡಿದ್ದಾರೆ ಎಂದು ಆರೋಪಿಸಿರುವ ಅವರು, ಸಚಿವರನ್ನು ಕೂಡಲೇ ಸಂಪುಟದಿಂದ ಕೈಬಿಡಬೇಕು ಎಂದು ಒತ್ತಾಯಿಸಿದ್ದಾರೆ.



ಭ್ರಷ್ಟಾಚಾರಕ್ಕೆ ಉತ್ತೇಜನ ನೀಡುವ ಹೇಳಿಕೆ ನೀಡಿರುವ ಸಚಿವ ಶಿವಲಿಂಗೇಗೌಡ ಅವರಿಂದ ಕೂಡಲೇ ರಾಜೀನಾಮೆ ಪಡೆಯಬೇಕು ಎಂದು ರಾಜು ಕುರುಡಗಿ ಆಗ್ರಹಿಸಿದ್ದಾರೆ.

### ವಿಮಾನದಲ್ಲಿ ಬೆಂಗಳೂರಿಗೆ ಎಂಟ್ರಿ, ಮನೆಗೆ ಕನ್ನ ಹಾಕಿ ಮತ್ತೆ ಫ್ಲೈಟ್‌ನಲ್ಲಿ ಎಸ್ಕೇಪ್

## ಕುಖ್ಯಾತ ಮನೆಗಳ್ಳ ಅರೆಸ್ಟ್!

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ವಿಮಾನದಲ್ಲಿ ಬೆಂಗಳೂರಿಗೆ ಬರುತ್ತಿದ್ದ, ಮನೆಗಳ್ಳತನ ಮಾಡಿ ಮತ್ತೆ ವಿಮಾನದಲ್ಲೇ ವಾಪಸ್ ತೆರಳುತ್ತಿದ್ದ ಆರೋಪಿಯೊಬ್ಬನನ್ನು ಪೊಲೀಸರು ಬಂಧಿಸಿದ್ದಾರೆ. ಮನೆಗಳ್ಳತನವನ್ನೇ ಕಾಯಕ ಮಾಡಿಕೊಂಡಿದ್ದ ಕುಖ್ಯಾತ ಮನೆಗಳ್ಳನನ್ನು ವಿಲ್ಸನ್ ಗಾರ್ಡನ್ ಪೊಲೀಸರು ಬಂಧಿಸಿದ್ದಾರೆ.

ಬಂಧಿತ ಆರೋಪಿಯನ್ನು ಹೈದರಾಬಾದ್ ಮೂಲದ ನೇನಾವತ್ ವಿನೋದ್ ಕುಮಾರ್ ಎಂದು ಗುರುತಿಸಲಾಗಿದೆ. ಬೆಂಗಳೂರಿನ ವಿಲ್ಸನ್ ಗಾರ್ಡನ್ 10ನೇ ಕ್ರಾಸ್‌ನಲ್ಲಿ ಆರೋಪಿ ತನ್ನ ಕೈಚಳಕ ತೋರಿದ್ದ ಎನ್ನಲಾಗಿದೆ.

ವೃದ್ಧ ದಂಪತಿ ಮನೆಯಲ್ಲಿದ್ದಾಗಲೇ ಮನೆಗೆ ಎಂಟ್ರಿ ಕೊಟ್ಟಿದ್ದ ಆರೋಪಿ, ಚಿನ್ನಾಭರಣ ದೋಚಿ ಪರಾರಿಯಾಗಿದ್ದ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡ ವಿಲ್ಸನ್ ಗಾರ್ಡನ್ ಪೊಲೀಸರು ತನಿಖೆ ಕೈಗೊಂಡಿದ್ದರು.

ತನಿಖೆ ನಡೆಸಿದ ಪೊಲೀಸರು ಇದೀಗ ಆರೋಪಿಯನ್ನು ಬಂಧಿಸಿದ್ದು, ಆತನಿಂದ ಬರೋಬ್ಬರಿ 40 ಲಕ್ಷ ರೂಪಾಯಿ ಮೌಲ್ಯದ 271 ಗ್ರಾಂ ಚಿನ್ನಾಭರಣವನ್ನು ವಶಕ್ಕೆ ಪಡೆದಿದ್ದಾರೆ.



ಇನ್ನು, ಬಂಧಿತ ಆರೋಪಿಯ ವಿರುದ್ಧ ಹೈದರಾಬಾದ್‌ನ ವಿವಿಧ ಪೊಲೀಸ್ ಠಾಣೆಗಳಲ್ಲೂ ಮನೆಗಳ್ಳತನ ಪ್ರಕರಣಗಳು ದಾಖಲಾಗಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ವಿಮಾನದಲ್ಲಿ ಬಂದು ನಗರದಲ್ಲಿ ಮನೆಗಳ್ಳತನ ನಡೆಸಿ, ಮತ್ತೆ ವಿಮಾನದಲ್ಲೇ ಪರಾರಿಯಾಗುತ್ತಿದ್ದ ಆರೋಪಿಯ ಕುರಿತು ಪೊಲೀಸರು ಹೆಚ್ಚಿನ ತನಿಖೆ ಮುಂದುವರಿಸಿದ್ದಾರೆ.

### ಅಲ್ಪಸಂಖ್ಯಾತರ ಯೋಜನೆ ಅರ್ಹರಿಗೆ ನೇರವಾಗಿ ಸಿಗಲಿ

# ಮಧ್ಯವರ್ತಿಗಳ ಕಾಟಕ್ಕೆ ಬ್ರೇಕ್ ಹಾಕಿ




**ವಿಜಯಸಾಕ್ಷಿ ಸುದ್ದಿ, ಗದಗ**

ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ವಿವಿಧ ಯೋಜನೆಗಳಲ್ಲಿ ಮಧ್ಯವರ್ತಿಗಳ ಹಾವಳಿ ಹೆಚ್ಚಾಗಿದೆ ಎಂದು ಆರೋಪಿಸಿ, ಇದಕ್ಕೆ ಕಡಿವಾಣ ಹಾಕುವಂತೆ ಆಗ್ರಹಿಸಿ ಗದಗ ಜಿಲ್ಲಾ ಸ್ಲಂ ಸಮಿತಿ ಹಾಗೂ ಗದಗ ಜಿಲ್ಲಾ ಅಲ್ಪಸಂಖ್ಯಾತರ ಹೋರಾಟ ಸಮಿತಿ ಪದಾಧಿಕಾರಿಗಳು ನಿಗಮದ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದರು.

ಗದಗ ಜಿಲ್ಲೆಯ ಸಾವಿರಾರು ಬಡ ಅಲ್ಪಸಂಖ್ಯಾತ ಕುಟುಂಬಗಳು ಕಟ್ಟಡ ಕಾರ್ಮಿಕರು, ಹಮಾಲರು, ಅಸಂಘಟಿತ ಕಾರ್ಮಿಕರು ಸೇರಿದಂತೆ ವಿವಿಧ ಶ್ರಮಿಕ ವೃತ್ತಿಗಳ ಮೂಲಕ ಜೀವನ ಸಾಗಿಸುತ್ತಿವೆ. ಇಂತಹ ಕುಟುಂಬಗಳ ಸ್ವಯಂ ಉದ್ಯೋಗ ಹಾಗೂ ಬಡ ಅಲ್ಪಸಂಖ್ಯಾತ ವಿದ್ಯಾರ್ಥಿಗಳ ಶಿಕ್ಷಣಕ್ಕೆ ನೆರವಾಗಲು ಸರ್ಕಾರ ಹಲವು ಯೋಜನೆಗಳ ಮೂಲಕ ಅನುದಾನ ನೀಡುತ್ತಿದೆ. ಆದರೆ ಈ ಯೋಜನೆಗಳ ಪ್ರಯೋಜನ ಅರ್ಹ ಫಲಾನುಭವಿಗಳಿಗೆ ಸಮರ್ಪಕವಾಗಿ ತಲುಪುತ್ತಿಲ್ಲ ಎಂದು ಸಮಿತಿ ಪದಾಧಿಕಾರಿಗಳು ಆರೋಪಿಸಿದರು.

ಗಂಗಾ ಕಲ್ಯಾಣ, ಅರಿವು, ಮೈಕ್ರೊ ಸಾಲ, ಶ್ರಮಶಕ್ತಿ, ಭೂ ಒಡೆತನ, ಪ್ರವಾಸಿ ಟ್ಯಾಕ್ಸಿ ಸೇರಿದಂತೆ ವಿವಿಧ ಯೋಜನೆಗಳಿಗೆ ಅನುದಾನ ನೀಡಲಾಗುತ್ತಿದ್ದರೂ, ನಿಜವಾದ ಬಡ ಕುಟುಂಬಗಳು ಅರ್ಜಿ ಸಲ್ಲಿಸಿ ಕಚೇರಿಗಳಿಗೆ ಅಲೆಯುವಂತಾಗಿದೆ. ಅಧಿಕಾರಿಗಳು ಮತ್ತು ಸಿಬ್ಬಂದಿ ಮಧ್ಯವರ್ತಿಗಳ ಮೂಲಕ ಕಮಿಷನ್ ಆಧಾರದಲ್ಲಿ ಯೋಜನೆಗಳನ್ನು ನೀಡುತ್ತಿದ್ದಾರೆ ಎಂಬ ಆರೋಪಗಳಿದ್ದು, ಈ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಒತ್ತಾಯಿಸಿದರು.

ನಿಗಮದಲ್ಲಿ ಹಲವು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯಿಂದ ಫಲಾನುಭವಿಗಳಿಗೆ ತೊಂದರೆಯಾಗುತ್ತಿದೆ ಎಂಬ ದೂರುಗಳ ಕುರಿತು ಅಧಿಕಾರಿಗಳು ಗಮನಹರಿಸಬೇಕು.

> ಸರ್ಕಾರದ ಯೋಜನೆಗಳು ನಿಜವಾದ ಬಡ ಅಲ್ಪಸಂಖ್ಯಾತ ಕುಟುಂಬಗಳಿಗೆ ತಲುಪಬೇಕು. ಮಧ್ಯವರ್ತಿಗಳ ಹಾವಳಿಗೆ ಕಡಿವಾಣ ಹಾಕಿ, ಫಲಾನುಭವಿಗಳು ನೇರವಾಗಿ ಕಚೇರಿಗೆ ಬಂದು ಯೋಜನೆಗಳಿಗೆ ಅರ್ಜಿ ಸಲ್ಲಿಸುವ ಪಾರದರ್ಶಕ ವ್ಯವಸ್ಥೆ ಕಲ್ಪಿಸಬೇಕು. ಹಲವು ವರ್ಷಗಳಿಂದ ಒಂದೇ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ಕಾರ್ಯವೈಖರಿಯನ್ನೂ ಪರಿಶೀಲಿಸಿ, ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು.
>
> – ಇಮ್ತಿಯಾಜ್ ಮಾನ್ವಿ, ಅಧ್ಯಕ್ಷರು, ಗದಗ ಜಿಲ್ಲಾ ಅಲ್ಪಸಂಖ್ಯಾತರ ಹೋರಾಟ ಸಮಿತಿ

ಅರ್ಹರಿಗೆ ಯೋಜನೆಗಳ ಸೌಲಭ್ಯ ದೊರೆಯುವಂತೆ ಪಾರದರ್ಶಕ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ಮನವಿ ಮಾಡಿದರು.

ಬೇಡಿಕೆಗಳನ್ನು ನಿರ್ಲಕ್ಷಿಸಿದರೆ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಕಚೇರಿ ಎದುರು ಹೋರಾಟ ನಡೆಸಲಾಗುವುದು ಎಂದು ಸಮಿತಿ ಪದಾಧಿಕಾರಿಗಳು ಎಚ್ಚರಿಸಿದರು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಎಂ.ಬಿ. ನದಾಫ್ ವಕೀಲರು, ಮುಖಂಡರಾದ ಶರಣಪ್ಪ ಸೂಡಿ, ಇಬ್ರಾಹಿಂ ಮುಲ್ಲಾ, ಮೆಹಬೂಬಸಾಬ ಬಳ್ಳಾರಿ, ರವಿ ಗೋಸಾವಿ, ಮಕ್ತುಮಸಾಬ ಮುಲ್ಲಾನವರ, ನಜಮುನಿಸಾ ಮುರಗೋಡ, ನಾಗರತ್ನ ಬನಗಾರ, ಶೌಕತಅಲಿ ಶಿರಹಟ್ಟಿ, ಹುಸೇನ ಮುಲ್ಲಾನವರ, ಶಂಕ್ರಪ್ಪ ರೋಣದ ಸೇರಿದಂತೆ ಸಮಿತಿಯ ಪದಾಧಿಕಾರಿಗಳು ಉಪಸ್ಥಿತರಿದ್ದರು.

---

### ಕಳಸಾಪುರ ಗ್ರಾಪಂ ಮಟ್ಟದ ಒಕ್ಕೂಟದಿಂದ ಮಾಸಿಕ ಸಂತೆ ಆಯೋಜನೆ

## ಸ್ವಸಹಾಯ ಸಂಘಗಳ ಉತ್ಪನ್ನಗಳಿಗೆ ಮಾರುಕಟ್ಟೆ ಸಂತೆ




**ವಿಜಯಸಾಕ್ಷಿ ಸುದ್ದಿ, ಗದಗ**

ಸ್ವಸಹಾಯ ಸಂಘಗಳ ಸದಸ್ಯರು ಉತ್ಪಾದಿಸುವ ಉತ್ಪನ್ನಗಳಿಗೆ ಸ್ಥಳೀಯ ಮಾರುಕಟ್ಟೆ ಒದಗಿಸುವ ಉದ್ದೇಶದಿಂದ ಕಳಸಾಪುರ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟದಲ್ಲಿ ಮಾಸಿಕ ಸಂತೆಯನ್ನು ಆಯೋಜಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಒಕ್ಕೂಟದ ಅಧ್ಯಕ್ಷೆ ಸುನಂದಾ ರಾಮನಗೌಡ್ರ ವಹಿಸಿದ್ದರು. ಗ್ರಾಮದ ಹಿರಿಯರು ಹಾಗೂ ಸ್ಪಂದನ ಸಂಸ್ಥೆಯ ಮುಖ್ಯಸ್ಥರಾದ ಸಿ.ಬಿ. ಪಲ್ಲೆದ್ ಅವರು ಮಾಸಿಕ ಸಂತೆಯನ್ನು ಉದ್ಘಾಟಿಸಿದರು.

ಸಂತೆಯಲ್ಲಿ ಕಳಸಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸುತ್ತಮುತ್ತಲಿನ ಗ್ರಾಮಗಳ ಸ್ವಸಹಾಯ ಸಂಘಗಳ ಸದಸ್ಯರು ತಾವು ತಯಾರಿಸಿದ ವಿವಿಧ ಉತ್ಪನ್ನಗಳನ್ನು ಮಾರಾಟಕ್ಕೆ ಇಟ್ಟಿದ್ದರು. ಗ್ರಾಹಕರಿಂದ ಉತ್ತಮ ಪ್ರತಿಕ್ರಿಯೆ ದೊರೆತಿದ್ದು, ಉತ್ಪನ್ನಗಳ ಮಾರಾಟದ ಮೂಲಕ ಸದಸ್ಯರು ಆದಾಯ ಗಳಿಸಿದರು.

ಸಭೆಯಲ್ಲಿ ಸ್ವಸಹಾಯ ಸಂಘಗಳ ಸದಸ್ಯರಿಗೆ ಜೀವನೋಪಾಯ ಚಟುವಟಿಕೆಗಳನ್ನು ಕೈಗೊಳ್ಳಲು ರಾಷ್ಟ್ರೀಯ ಗ್ರಾಮೀಣ ಸಂವರ್ಧನ ಸಂಸ್ಥೆಯ ಮೂಲಕ ದೊರೆಯುವ ವಿವಿಧ ಸೌಲಭ್ಯಗಳ ಕುರಿತು ಸಮಗ್ರ ಮಾಹಿತಿ ನೀಡಲಾಯಿತು. ಪ್ರತಿಯೊಬ್ಬರೂ ಸ್ವಾವಲಂಬಿ ಜೀವನೋಪಾಯ ಚಟುವಟಿಕೆಗಳನ್ನು ಕೈಗೊಂಡು ತಮ್ಮ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ಕಲ್ಪಿಸಿಕೊಳ್ಳುವಂತೆ ಸಲಹೆ ನೀಡಲಾಯಿತು.

ವಾರದ ಸಂತೆ, ಮಾಸಿಕ ಸಂತೆ ಸೇರಿದಂತೆ ಸ್ಥಳೀಯ ಮಾರುಕಟ್ಟೆಗಳ ಜೊತೆಗೆ ಡಿಜಿಟಲ್ ಮಾರುಕಟ್ಟೆಯನ್ನೂ ಬಳಸಿಕೊಂಡು ಉತ್ಪನ್ನಗಳನ್ನು ಮಾರಾಟ ಮಾಡುವ ಮೂಲಕ ವ್ಯವಹಾರವನ್ನು ವಿಸ್ತರಿಸಿಕೊಳ್ಳಬಹುದು. ಇದರಿಂದ ಸ್ವಸಹಾಯ ಸಂಘಗಳ ಸದಸ್ಯರು ಆರ್ಥಿಕವಾಗಿ ಸದೃಢರಾಗಿ ಉತ್ತಮ ಜೀವನಮಟ್ಟ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ತಾಲೂಕು ಕಾರ್ಯಕ್ರಮ ವ್ಯವಸ್ಥಾಪಕ ಲಕ್ಷ್ಮಣ ಪೂಜಾರ, ತಾಲೂಕು ಸಂಯೋಜಕ ಗವಿಸಿದ್ದಪ್ಪ ಕಂದಗಲ್, ವಲಯ ಮೇಲ್ವಿಚಾರಕ ಸಿದ್ದು ಸತ್ಯಮ್ಮನವರ, ಒಏಕಅ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಮೇಶ್, ತಾಲೂಕು ಸಂಪನ್ಮೂಲ ವ್ಯಕ್ತಿ ಶೋಭಾ ಪ್ರಕಾಶ ಹಗೇದಾಳ, ಃಆಖಕಗಳಾದ ಕವಿತಾ, ಬಾಳಮ್ಮ, ಜ್ಯೋತಿ, ಶ್ರೀದೇವಿ, ಒಕ್ಕೂಟದ ಸಿಬ್ಬಂದಿಗಳಾದ ಒಃಏ ಶೋಭಾ, ಸಣ್ಣಕ್ಕಿ, ಐಅಖಕ ಶಾರದಾ ಹೂಗಾರ್, ಪಾರ್ವತಿ ಹೂಗಾರ್, ಕೃಷಿ ಸಖಿ ಶೈಲಾ ಹಗೇದಾಳ, ಪಶುಸಖಿ ಗಂಗವ್ವ ಛಲವಾದಿ ಸೇರಿದಂತೆ ಸ್ವಸಹಾಯ ಸಂಘಗಳ ಸದಸ್ಯರು ಉಪಸ್ಥಿತರಿದ್ದರು.

---

### ರೋಗದ ವಿರುದ್ಧ ಹೋರಾಡೋಣ, ರೋಗಿಯ ವಿರುದ್ಧ ಅಲ್ಲ

## ಎಚ್‌ಐವಿ ಬಗ್ಗೆ ಭಯ ಬೇಡ; ಅರಿವು ಇರಲಿ



**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ಎಚ್‌ಐವಿ/ಏಡ್ಸ್ ಕುರಿತು ಸಮಾಜದಲ್ಲಿರುವ ತಪ್ಪು ಕಲ್ಪನೆ, ಭಯ ಹಾಗೂ ಕಳಂಕದ ಮನೋಭಾವವನ್ನು ನಿವಾರಿಸಲು ವೈಜ್ಞಾನಿಕ ಅರಿವು ಮೂಡಿಸುವುದು ಅಗತ್ಯ ಎಂದು ಯುವ ರೆಡ್ ಕ್ರಾಸ್ ಮತ್ತು ರೆಡ್ ರಿಬ್ಬನ್ ಘಟಕದ ಕಾರ್ಯಕ್ರಮ ಅಧಿಕಾರಿ ಭೀಮೇಶ ಹೇಳಿದರು.

ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಯುವ ರೆಡ್ ಕ್ರಾಸ್, ರೆಡ್ ರಿಬ್ಬನ್ ಘಟಕ ಹಾಗೂ ಆಂತರಿಕ ಗುಣಮಟ್ಟ ಭರವಸೆ ಕೋಶದ ಸಹಯೋಗದಲ್ಲಿ ಜಿಲ್ಲಾಡಳಿತ ಹಾಗೂ ಆರೋಗ್ಯ ಇಲಾಖೆ ಆಶ್ರಯದಲ್ಲಿ 'ನಿಮ್ಮ ಎಚ್‌ಐವಿ ಸ್ಥಿತಿಯನ್ನು ತಿಳಿದುಕೊಳ್ಳಿ' ಎಂಬ ಆಶಯದೊಂದಿಗೆ 'ಮೊಬಲೈಸೇಶನ್ ಫಾರ್ ಏಡ್ಸ್ ಸುರಕ್ಷಾ ಅಭಿಯಾನ–2026' ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಅಪ್ಪಣ್ಣ ಎನ್. ಹಂಜೆ ಮಾತನಾಡಿ, ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಎಚ್‌ಐವಿ ಮತ್ತು ಏಡ್ಸ್ ಕುರಿತು ಜಾಗೃತಿ ಮೂಡಿಸುವುದು ಇಂದಿನ ಅಗತ್ಯ. ಪ್ರತಿಯೊಬ್ಬರೂ ತಮ್ಮ ಆರೋಗ್ಯದ ಬಗ್ಗೆ ಕಾಳಜಿ ವಹಿಸುವುದರ ಜೊತೆಗೆ ಸಮಾಜದಲ್ಲೂ ಅರಿವು ಮೂಡಿಸಬೇಕು ಎಂದು ಕರೆ ನೀಡಿದರು.

> ರೋಗದ ವಿರುದ್ಧ ಹೋರಾಡೋಣ, ರೋಗಿಯ ವಿರುದ್ಧ ಅಲ್ಲ. ತಪ್ಪು ಕಲ್ಪನೆ ಮತ್ತು ಕಳಂಕ ನಿವಾರಣೆಗೆ ವೈಜ್ಞಾನಿಕ ಮಾಹಿತಿ ಹಾಗೂ ಮಾನವೀಯ ಮನೋಭಾವ ಅಗತ್ಯ.
>
> – ಭೀಮೇಶ, ಕಾರ್ಯಕ್ರಮ ಅಧಿಕಾರಿ

ಪ್ರಾಸ್ತಾವಿಕವಾಗಿ ಮಾತನಾಡಿದ ಭೀಮೇಶ, ಎಚ್‌ಐವಿ ಸೋಂಕಿತರೊಂದಿಗೆ ಹಸ್ತಲಾಘವ ಮಾಡುವುದರಿಂದ ಅಥವಾ ಒಟ್ಟಿಗೆ ಊಟ ಮಾಡುವುದರಿಂದ ಸೋಂಕು ಹರಡುವುದಿಲ್ಲ. ಆದ್ದರಿಂದ ಸೋಂಕಿತರನ್ನು ತಾರತಮ್ಯದಿಂದ ನೋಡದೆ ಮಾನವೀಯತೆಯಿಂದ ಬೆಂಬಲಿಸಬೇಕು. ವಿದ್ಯಾರ್ಥಿಗಳು ತಮ್ಮ ಗ್ರಾಮ ಹಾಗೂ ನೆರೆಹೊರೆಯಲ್ಲಿ ಎಚ್‌ಐವಿ/ಏಡ್ಸ್ ಕುರಿತು ಜಾಗೃತಿ ಮೂಡಿಸುವ ರಾಯಭಾರಿಗಳಾಗಬೇಕು ಎಂದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಗದಗ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮೇಲ್ವಿಚಾರಕ ಡಾ. ಬಸವರಾಜ ಲಾಲಗಟ್ಟಿ ಮಾತನಾಡಿ, ಎಚ್‌ಐವಿ/ಏಡ್ಸ್ ಮುಕ್ತ ಸಮಾಜ ನಿರ್ಮಾಣದಲ್ಲಿ ಯುವಜನರ ಪಾತ್ರ ಮಹತ್ವದ್ದಾಗಿದೆ. ಪ್ರತಿಯೊಬ್ಬರೂ ತಮ್ಮ ಎಚ್‌ಐವಿ ಸ್ಥಿತಿಯನ್ನು ತಿಳಿದುಕೊಳ್ಳುವುದು ಆರೋಗ್ಯಕರ ಜೀವನದ ಪ್ರಮುಖ ಹೆಜ್ಜೆಯಾಗಿದೆ ಎಂದರು. ಎಚ್‌ಐವಿ ತಡೆಗಟ್ಟುವ ಮುನ್ನೆಚ್ಚರಿಕೆ ಕ್ರಮಗಳು ಹಾಗೂ ಸೋಂಕಿತರ ಕುರಿತು ಇರುವ ಭೀತಿ, ಅಪಕಲ್ಪನೆಗಳನ್ನು ನಿವಾರಿಸುವ ಅಗತ್ಯದ ಕುರಿತು ಮಾಹಿತಿ ನೀಡಿದ ಅವರು, ಸರ್ಕಾರಿ ಆಸ್ಪತ್ರೆಗಳಲ್ಲಿ ಲಭ್ಯವಿರುವ ಉಚಿತ ಪರೀಕ್ಷೆ, ಚಿಕಿತ್ಸೆ ಮತ್ತು ಸಮಾಲೋಚನಾ ಸೌಲಭ್ಯಗಳನ್ನು ಬಳಸಿಕೊಳ್ಳುವಂತೆ ಮನವಿ ಮಾಡಿದರು.

ಆಂತರಿಕ ಗುಣಮಟ್ಟ ಭರವಸೆ ಕೋಶದ ಸಂಯೋಜಕ ಡಾ. ಜಿತೇಂದ್ರ ಜಹಾಗೀರದಾರ ಮಾತನಾಡಿ, ಶಿಕ್ಷಣದ ಜೊತೆಗೆ ಆರೋಗ್ಯ ಅರಿವು ಹಾಗೂ ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸಿಕೊಳ್ಳಬೇಕು ಎಂದರು.

ಅರ್ಥಶಾಸ್ತ್ರ ವಿಭಾಗದ ಪ್ರಾಧ್ಯಾಪಕಿ ಪವಿತ್ರಾ ಬಿ.ಸಿ. ಸ್ವಾಗತಿಸಿದರು. ಯುವ ರೆಡ್ ಕ್ರಾಸ್ ಘಟಕದ ಸದಸ್ಯ ನವೀನ ಮರಿಗೌಡ್ರು ನಿರೂಪಿಸಿದರು. ಮನೋಜಕುಮಾರ ಜೋತಾವರ ವಂದನಾರ್ಪಣೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮಹಾನಂದ ಹಿರೇಮಠ, ಡಾ. ಸಾರಿಕಾ ಪಾಟೀಲ, ಬುಳ್ಳಪ್ಪ, ಸಾವಿತ್ರಿ ಟಿ., ವಿಜಯಕುಮಾರ ಎಸ್., ರೋಹಿಣಿ ರಾಚಣ್ಣವರ, ಸುಭಾಷ ಹರಿಹರ, ಡಾ. ಸುಜಾತ ಬರದೂರ ಸೇರಿದಂತೆ ಬೋಧಕ, ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

---

### ನಮ್ಮ ಅಂಗನವಾಡಿ, ನಮ್ಮ ಜವಾಬ್ದಾರಿ- ಘೋಷವಾಕ್ಯದಡಿ ಕಾರ್ಯಕ್ರಮ

## ಪೋಷಣ ಮಾಸಕ್ಕೆ ಪೌಷ್ಟಿಕತೆಯ ಸ್ಪರ್ಶ

**ವಿಜಯಸಾಕ್ಷಿ ಸುದ್ದಿ, ಗದಗ**

ಗರ್ಭಿಣಿಯರು, ಬಾಣಂತಿಯರು ಹಾಗೂ ಮಕ್ಕಳಲ್ಲಿ ಪೌಷ್ಟಿಕ ಆಹಾರ ಮತ್ತು ಆರೋಗ್ಯದ ಕುರಿತು ಅರಿವು ಮೂಡಿಸುವ ಉದ್ದೇಶದಿಂದ ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಹೊಂಬಳದ ತಾಲೂಕು ಮಟ್ಟದ ಸ್ತ್ರೀಶಕ್ತಿ ಭವನದಲ್ಲಿ ಪೋಷಣ ಮಾಸಾಚರಣೆ ಕಾರ್ಯಕ್ರಮ ನಡೆಯಿತು.

> ಹಮಾರಿ ಅಂಗನವಾಡಿ, ಹಮಾರಿ ಜಿಮ್ಮೆದಾರಿ' (ನಮ್ಮ ಅಂಗನವಾಡಿ, ನಮ್ಮ ಜವಾಬ್ದಾರಿ) ಎಂಬ ಘೋಷವಾಕ್ಯದಡಿ ಈ ಬಾರಿಯ ಪೋಷಣ ಮಾಸಾಚರಣೆ ನಡೆಯುತ್ತಿದೆ. ಅಂಗನವಾಡಿಗಳಲ್ಲಿ ಪೂರಕ ಪೌಷ್ಟಿಕ ಆಹಾರ ವಿತರಣೆಯ ವೇಳಾಪಟ್ಟಿಯನ್ನು ನವೀಕರಿಸಲಾಗಿದ್ದು, ಅದರ ಪ್ರಾತ್ಯಕ್ಷಿಕೆಯನ್ನೂ ಆಯೋಜಿಸಲಾಗಿದೆ. ಅರ್ಹ ಫಲಾನುಭವಿಗಳು ಅಂಗನವಾಡಿ ಕೇಂದ್ರಗಳ ಮೂಲಕ ಸೌಲಭ್ಯ ಪಡೆದುಕೊಳ್ಳಬೇಕು."
>
> – ಮಹಾಂತಸ್ವಾಮಿ ಪೂಜಾರ, ಜಿಲ್ಲಾ ನಿರೂಪಣಾಧಿಕಾರಿ

9ನೇ ರಾಷ್ಟ್ರೀಯ ಪೋಷಣ ಮಾಸಾಚರಣೆ ಕಾರ್ಯಕ್ರಮವನ್ನು ಬಾಲವಿಕಾಸ ಸಮಿತಿ ಅಧ್ಯಕ್ಷೆ ಲಲಿತಾ ಉದ್ಘಾಟಿಸಿದರು. ಮಾತೃವಂದನಾ ಜಿಲ್ಲಾ ಸಂಯೋಜಕಿ ನೇತ್ರಾ ಹರ್ತಿ ಮಾತೃವಂದನಾ ಯೋಜನೆಯ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಮಹಿಳಾ ಅಭಿವೃದ್ಧಿ ನಿಗಮದ ಅಭಿವೃದ್ಧಿ ನಿರೀಕ್ಷಕಿ ದ್ರಾಕ್ಷಾಯಿಣಿ ಪಾಟೀಲ ಗೃಹಲಕ್ಷ್ಮೀ, ಉದ್ಯೋಗಿನಿ ಸೇರಿದಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಯೋಜನೆಗಳ ಕುರಿತು ವಿವರಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೇಲ್ವಿಚಾರಕಿ ಎಚ್.ಎಸ್. ದೊಡ್ಡಮನಿ ಮಾತನಾಡಿ, ಸೂಕ್ತ ವಯಸ್ಸಿನಲ್ಲಿ ವಿವಾಹವಾಗುವುದರಿಂದ ಗರ್ಭಿಣಿ, ಬಾಣಂತಿ ಹಾಗೂ ಮಕ್ಕಳ ಆರೋಗ್ಯ ಕಾಪಾಡಿಕೊಳ್ಳಲು ಸಹಕಾರಿಯಾಗುತ್ತದೆ. ಜಂಕ್‌ಫುಡ್ ಸೇವನೆ ಕಡಿಮೆ ಮಾಡಿ ಪೌಷ್ಟಿಕ ಆಹಾರಕ್ಕೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಗರ್ಭಿಣಿಯರ ಸೀಮಂತ, ಅಂಗನವಾಡಿಯ ನೂತನ ಫುಡ್ ಮೆನು ಪ್ರಕಾರ ಪೂರಕ ಪೌಷ್ಟಿಕ ಆಹಾರದ ಪ್ರಾತ್ಯಕ್ಷಿಕೆ, ಅನ್ನಪ್ರಾಶನ, 'ಬೇಟಿ ಬಚಾವೋ–ಬೇಟಿ ಪಢಾವೋ' ಕಾರ್ಯಕ್ರಮ ಹಾಗೂ ಮಕ್ಕಳ ಹುಟ್ಟುಹಬ್ಬ ಆಚರಣೆ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಯಿತು.

ಮುಖ್ಯ ಅತಿಥಿಯಾಗಿ ಗದಗ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಹೆಚ್.ಎಸ್. ಜೋಗೇರ್ ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿ ಮಹಾಂತಸ್ವಾಮಿ ಪೂಜಾರ ಮಾತನಾಡಿ, ಜಿಲ್ಲೆಯಾದ್ಯಂತ ಅಂಗನವಾಡಿ ಕೇಂದ್ರಗಳಲ್ಲಿ ಪೋಷಣ ಮಾಸಾಚರಣೆ ನಡೆಯುತ್ತಿದೆ. ಮಕ್ಕಳ ಎತ್ತರ ಮತ್ತು ತೂಕವನ್ನು ಅಳೆಯುವ ಮೂಲಕ ಅವರ ಬೆಳವಣಿಗೆಯ ಮಟ್ಟವನ್ನು ಗುರುತಿಸಿ, ಅಗತ್ಯವಿದ್ದಲ್ಲಿ ಸೂಕ್ತ ಚಿಕಿತ್ಸೆಗೆ ಶಿಫಾರಸು ಮಾಡಲಾಗುತ್ತಿದೆ ಎಂದರು.

ಆಯುಷ್ ವೈದ್ಯಾಧಿಕಾರಿ ಎಲ್.ಎಫ್. ನಾರ್ಸಿ, ಪೋಷಣ ಅಭಿಯಾನ ಜಿಲ್ಲಾ ಸಹಾಯಕ ಪವನ ಕಾಟೀಗರ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರು, ಎಲ್‌ಎಸ್‌ಎಂ ಪ್ರೌಢಶಾಲೆಯ ವಿದ್ಯಾರ್ಥಿನಿಯರು, ಸಾರ್ವಜನಿಕರು, ಗರ್ಭಿಣಿಯರು, ಬಾಣಂತಿಯರು, ಕಿಶೋರಿಯರು ಹಾಗೂ ಮಕ್ಕಳು ಭಾಗವಹಿಸಿದ್ದರು. ರುದ್ರಮ್ಮ ತಿರ್ಲಾಪೂರ ಸ್ವಾಗತಿಸಿದರು. ಜನ್ನತಬಿ ಮೀರಾನಾಯಕ ನಿರೂಪಿಸಿದರು. ಮೇಘಾ ಕರಿಯಲ್ಲಪ್ಪನವರ ವಂದಿಸಿದರು.




---

## ಎಪಿಎಂಸಿ ಗಣೇಶನಿಗೆ ಎಸ್.ವಿ. ಸಂಕನೂರರಿಂದ ವಿಶೇಷ ಪೂಜೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಾನಯೋಗಿ ಶ್ರೀ ಪಂಡಿತ ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಆವರಣದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಲಾಗಿರುವ ಶ್ರೀ ಗಣೇಶ ಮೂರ್ತಿಗೆ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರು ಒಂಬತ್ತನೇ ದಿನವಾದ ಮಂಗಳವಾರ ವಿಶೇಷ ಪೂಜೆ ಸಲ್ಲಿಸಿ, ಮಂಗಳಾರತಿ ನೆರವೇರಿಸಿದರು.

ಬೆಳಗಿನ ಪೂಜಾ ಸಮಯದಲ್ಲಿ ಎಪಿಎಂಸಿ ಆವರಣಕ್ಕೆ ಆಗಮಿಸಿದ ಸಂಕನೂರ ಅವರು ಶ್ರೀ ಗಣೇಶನ ದರ್ಶನ ಪಡೆದು, ವಿಶೇಷ ಪೂಜೆ ಸಲ್ಲಿಸಿದರು. ಬಳಿಕ ಮಂಗಳಾರತಿ ನೆರವೇರಿಸಿ ಗಜಾನನನ ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿಯ ಪದಾಧಿಕಾರಿಗಳು ಹಾಗೂ ಸದಸ್ಯರು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರಿಗೆ ಶಾಲು ಹೊದಿಸಿ, ಸ್ಮರಣಿಕೆ ನೀಡಿ ಆತ್ಮೀಯವಾಗಿ ಸನ್ಮಾನಿಸಿದರು.

ಕಾರ್ಯಕ್ರಮದಲ್ಲಿ ಟ್ರಸ್ಟ್ ಅಧ್ಯಕ್ಷ ತಿಮ್ಮರೆಡ್ಡಿ ಕೋನರೆಡ್ಡಿ, ಗೌರವಾಧ್ಯಕ್ಷ ಪ್ರಮೋದ ಆರ್. ವಾರಕರ, ಕಾರ್ಯದರ್ಶಿ ರಾಜಶೇಖರ ಬಿ. ಮುಧೋಳ, ಉಪಾಧ್ಯಕ್ಷ ರಾಜು ಎನ್. ಮೂಲೀಮನಿ, ಸಹಕಾರ್ಯದರ್ಶಿ ಚಂದ್ರಕಾಂತ ಬಿ. ಸವದತ್ತಿ, ಖಜಾಂಚಿ ಮಹೇಶ ಜಿ. ಗಾಣಿಗೇರ, ವಿನಾಯಕ ಪಿ. ವಜೇಶ್ವರಿ, ವಿವೇಕಾನಂದ ಗುಡಿಮನಿ, ಕೊಟ್ರೇಶ ಈ. ಬಾಳಿಕಾಯಿ, ಗಿರೀಶ ವಿ. ಅಳವಂಡಿ, ದಯಾನಂದ ದುಂಡಪ್ಪನವರ, ವಿನಯ ವಿ. ಕಾಡಪ್ಪನವರ ಸೇರಿದಂತೆ ಎಪಿಎಂಸಿ ವರ್ತಕರು, ಪ್ರಮುಖ ಮುಖಂಡರು ಹಾಗೂ ಭಕ್ತರು ಉಪಸ್ಥಿತರಿದ್ದು, ಶ್ರೀ ಗಣೇಶನ ದರ್ಶನ ಪಡೆದರು.

---

### ₹ 11.32 ಕೋಟಿ ವಹಿವಾಟು; ಶೇ.90 ಸಾಲ ವಸೂಲಿ

## ಲಕ್ಕುಂಡಿ ಕೃಷಿ ಪತ್ತಿನ ಸಂಘಕ್ಕೆ ₹3.43 ಲಕ್ಷ ಲಾಭ

**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ರೈತರಿಗೆ ಬಿತ್ತನೆ ಬೀಜ, ಕೃಷಿ ಸಾಲ, ಬೆಂಬಲ ಬೆಲೆಯಲ್ಲಿ ಕಡಲೆ ಖರೀದಿ ಸೇರಿದಂತೆ ವಿವಿಧ ಸೇವೆಗಳನ್ನು ಒದಗಿಸುತ್ತಿರುವ ಲಕ್ಕುಂಡಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಂ.2, 2025–26ನೇ ಸಾಲಿನಲ್ಲಿ ₹11.32 ಕೋಟಿ ವಹಿವಾಟು ನಡೆಸಿ ₹3.43 ಲಕ್ಷ ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಮಹೇಶ ಮುಸ್ಕಿನಭಾವಿ ತಿಳಿಸಿದರು.




ಲಕ್ಕುಂಡಿಯಲ್ಲಿರುವ ಸಂಘದ 108ನೇ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸದಸ್ಯರು ಹಾಗೂ ಗ್ರಾಹಕರ ನಿರಂತರ ಸಹಕಾರದಿಂದ ಸಂಘ ಪ್ರಗತಿಯತ್ತ ಸಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಶೇ.90ರಷ್ಟು ಸಾಲ ವಸೂಲಿಯಾಗಿರುವುದು ಸಂತಸದ ಸಂಗತಿ. ಲಾಭದಲ್ಲಿ ಷೇರುದಾರರಿಗೆ ಶೇ.8ರಷ್ಟು ಡಿವಿಡೆಂಡ್ ನೀಡಲಾಗುತ್ತಿದೆ ಎಂದರು.

ರೈತ ಸದಸ್ಯರಿಗೆ ಬಡ್ಡಿರಹಿತ ಸಾಲದ ಜತೆಗೆ ಶೇ.3ರ ಬಡ್ಡಿದರದಲ್ಲಿ ಕೃಷಿ ಮಾಧ್ಯಮಿಕ ಸಾಲ ನೀಡಲಾಗುತ್ತಿದೆ. ಸಂಘದ ಸೇವೆಗಳನ್ನು ರೈತರು ಸದುಪಯೋಗಪಡಿಸಿಕೊಳ್ಳಬೇಕು. ಕಳೆದ ವರ್ಷ ಆರಂಭಿಸಿರುವ ನ್ಯಾಯಬೆಲೆ ಅಂಗಡಿಯಲ್ಲಿ 149 ಪಡಿತರ ಚೀಟಿಗಳಿದ್ದು, ಸಂಘದ ಸದಸ್ಯರ ಸಂಖ್ಯೆ 359ಕ್ಕೆ ಏರಿಕೆಯಾಗಿದೆ ಎಂದು ಹೇಳಿದರು.

ಸಂಘದ ಮುಖ್ಯ ಕಾರ್ಯನಿರ್ವಾಹಕ ಜಿ.ಬಿ. ಬೆನಕಲ್ ವಾರ್ಷಿಕ ವರದಿ ಮಂಡಿಸಿ, ಸಂಘದ ದುಡಿಯುವ ಬಂಡವಾಳ ₹2.80 ಕೋಟಿಯಷ್ಟಿದೆ. ಹಿಂದಿನ ಸಾಲಿನ ₹93.77 ಲಕ್ಷದಷ್ಟಿದ್ದ ಠೇವಣಿ ಪ್ರಸಕ್ತ ಸಾಲಿನಲ್ಲಿ ₹4.37 ಲಕ್ಷ ಹೆಚ್ಚಳವಾಗಿ ₹98.14 ಲಕ್ಷಕ್ಕೆ ತಲುಪಿದೆ ಎಂದು ತಿಳಿಸಿದರು.

ಬೀಜ ಮಾರಾಟ, ಕಡಲೆ ಖರೀದಿ, ಠೇವಣಿ, ಸಾಲ, ಪಿಗ್ಮಿ ಸಾಲ, ಬೆಳೆ ಸಾಲ ಹಾಗೂ ನ್ಯಾಯಬೆಲೆ ಅಂಗಡಿ ಸೇರಿದಂತೆ ವಿವಿಧ ಚಟುವಟಿಕೆಗಳಿಂದ ಸಂಘಕ್ಕೆ ₹3.43 ಲಕ್ಷ ನಿವ್ವಳ ಲಾಭ ಬಂದಿದೆ ಎಂದು ವಿವರಿಸಿದರು.

ಸಂಘದ ಉಪಾಧ್ಯಕ್ಷ ಪರಶುರಾಮ ಕರಿಯಲ್ಲಪ್ಪನವರ ಮಾತನಾಡಿ, ರಾಸಾಯನಿಕ ಮತ್ತು ಸಾವಯವ ಗೊಬ್ಬರ ಮಾರಾಟಕ್ಕೆ ಕೃಷಿ ಇಲಾಖೆಯಿಂದ ಪರವಾನಗಿ ದೊರೆತಿದ್ದು, ಶೀಘ್ರದಲ್ಲೇ ಮಾರಾಟ ಆರಂಭಿಸಲಾಗುವುದು ಎಂದರು.

ಸಂಘದ ಸದಸ್ಯ ದತ್ತಾತ್ರೇಯ ಜೋಶಿ ಮಾತನಾಡಿ, ರೈತರು ಸರ್ಕಾರದ ಯೋಜನೆಗಳ ಸದುಪಯೋಗ ಪಡೆದುಕೊಂಡು ಒಂದೇ ಬೆಳೆಗೆ ಅವಲಂಬಿತರಾಗದೆ ವೈವಿಧ್ಯಮಯ ಕೃಷಿ ಕೈಗೊಂಡು ಆದಾಯ ಹೆಚ್ಚಿಸಿಕೊಳ್ಳಬೇಕು ಎಂದರು.

ಪಿಡಿಒ ಅಮೀರನಾಯಕ ನಾಯಕ ವಿ.ಬಿ.ಜಿ.–ರಾಮ್‌ಜಿ ಯೋಜನೆಯಡಿ ರೈತರಿಗೆ ದೊರೆಯುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಸಂಘದ ಹಿರಿಯ ಸದಸ್ಯರು ಹಾಗೂ ಕೃಷಿ ಮತ್ತು ಹೈನುಗಾರಿಕೆಯಲ್ಲಿ ಸಾಧನೆ ಮಾಡಿದ ರೈತರನ್ನು ಸನ್ಮಾನಿಸಲಾಯಿತು. ಸಂಘದ ಹಿರಿಯರಾದ ಈಶ್ವರಪ್ಪ ಕುಂಬಾರ ಹಾಗೂ ಗವಿಸಿದ್ದಪ್ಪ ರೇವಡಿ ಕಾರ್ಯಕ್ರಮ ಉದ್ಘಾಟಿಸಿದರು.

> ಸಂಘ 108 ವರ್ಷಗಳನ್ನು ಪೂರೈಸಿರುವುದು ಹೆಮ್ಮೆಯ ಸಂಗತಿ. ಶತಮಾನೋತ್ಸವ ಆಚರಣೆಗೆ ಚರ್ಚೆ ನಡೆಯುತ್ತಿದ್ದು, ಸದಸ್ಯರು ಅಗತ್ಯ ಸಹಕಾರ ನೀಡಬೇಕು.
>
> – ಮಹೇಶ ಮುಸ್ಕಿನಭಾವಿ, ಅಧ್ಯಕ್ಷರು

ನಿರ್ದೇಶಕರಾದ ಮಲ್ಲಿಕಾರ್ಜುನ ಹಗರಿ, ಅಶೋಕ ಮುಸ್ಕಿನಭಾವಿ, ಪಂಚಾಕ್ಷರಯ್ಯ ನಾಗಾವಿಮಠ, ನಿಂಗಪ್ಪ ಮಂಗಳೂರು, ವಿರುಪಾಕ್ಷಪ್ಪ ಕಮತರ, ಕಲ್ಲಪ್ಪ ಬಣವಿ, ಸಕ್ರಪ್ಪ ರಾಮತಾಳ, ಮಾಳವ್ವ ಸೋಮನಕಟ್ಟಿ, ಗಂಗಮ್ಮ ಮುಕ್ಕಣ್ಣವರ, ಅನ್ನಪೂರ್ಣ ಹಡಗಲಿ, ಗ್ರಾಪಂ ಕಾರ್ಯದರ್ಶಿ ಗಣೇಶ ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಶರಣಪ್ಪ ಗರ್ಜಪ್ಪನವರ ಪ್ರಾರ್ಥಿಸಿದರು. ಬಸವರಾಜ ಮುಳ್ಳಾಳ ಸ್ವಾಗತಿಸಿದರು. ಮಂಜುನಾಥ ಗದಗಿನ ನಿರೂಪಿಸಿದರು. ಕಿರಣ ಬಡಿಗೇರ ವಂದಿಸಿದರು.

---

### ವಿದ್ಯಾರ್ಥಿಗಳಲ್ಲಿ ಹೆಚ್ಚುತ್ತಿರುವ ದೃಷ್ಟಿ ಸಮಸ್ಯೆ ತಡೆಗೆ ನೇತ್ರ ತಪಾಸಣಾ ಶಿಬಿರ

## ಮೊಬೈಲ್ ಕಾಟಕ್ಕೆ ಕಣ್ಣುಗಳೇ ಬಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಡಿಜಿಟಲ್ ಯುಗದಲ್ಲಿ, ವಿಶೇಷವಾಗಿ ವಿದ್ಯಾರ್ಥಿಗಳಲ್ಲಿ ಮೊಬೈಲ್ ಬಳಕೆ ಹೆಚ್ಚುತ್ತಿರುವುದರಿಂದ ಕಣ್ಣಿನ ದೃಷ್ಟಿ ಸಮಸ್ಯೆಗಳು ಹೆಚ್ಚುತ್ತಿರುವುದು ವಿಷಾದನೀಯ ಎಂದು ಸ್ಟುಡೆಂಟ್ಸ್ ಎಜುಕೇಶನ್ ಸಂಸ್ಥೆಯ ಆಡಳಿತಾಧಿಕಾರಿ ಮೃತ್ಯುಂಜಯ ಹಿರೇಮಠ ಹೇಳಿದರು.

ನಗರದ ಸನ್ಮಾರ್ಗ ಕಾಲೇಜಿನಲ್ಲಿ ಖ್ಯಾತ ನೇತ್ರ ತಜ್ಞ ಡಾ. ಜವಾಹರ ಮೇರವಾಡೆ ಹಾಗೂ ಮಾ. ಕೂಷ್ಮಾಂಡ ಟ್ರಸ್ಟ್‌ಗಳ ಸಹಯೋಗದಲ್ಲಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ನೇತ್ರ ತಪಾಸಣಾ ಶಿಬಿರದಲ್ಲಿ ಮಾತನಾಡಿದರು.

ಕಣ್ಣು ಬದುಕನ್ನು ನೋಡುವ ಹಾಗೂ ಅರ್ಥೈಸಿಕೊಳ್ಳುವ ದೇಹದ ಪ್ರಮುಖ ಅಂಗ. ವಿದ್ಯಾರ್ಥಿಗಳು ಮೊಬೈಲ್ ಹಾಗೂ ಇತರ ಡಿಜಿಟಲ್ ಸಾಧನಗಳ ಬಳಕೆಯಲ್ಲಿ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕು. ವಿದ್ಯಾರ್ಥಿಗಳ ಆರೋಗ್ಯದ ದೃಷ್ಟಿಯಿಂದ ನೇತ್ರ ತಪಾಸಣಾ ಶಿಬಿರ ಆಯೋಜಿಸಿರುವ ಡಾ. ಜವಾಹರ ಮೇರವಾಡೆ ಹಾಗೂ ಮಾ. ಕೂಷ್ಮಾಂಡ ಟ್ರಸ್ಟ್‌ಗಳ ಕಾರ್ಯ ಶ್ಲಾಘನೀಯ ಎಂದು ಹಿರೇಮಠ ಹೇಳಿದರು.

ನೇತ್ರ ತಪಾಸಣಾ ಶಿಬಿರವನ್ನು ಶಾರದಾ ಹೊಸಮನಿ, ಯಾಸ್ಮಿನ್ ಕೋಳೂರು ಹಾಗೂ ಇಂದ್ರಕುಮಾರ ಕುಲಕರ್ಣಿ ಯಶಸ್ವಿಯಾಗಿ ನಡೆಸಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಪ್ರೊ. ರಾಜೇಶ ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪುನೀತ ದೇಶಪಾಂಡೆ, ನಿರ್ದೇಶಕರಾದ ಪ್ರೊ. ರೋಹಿತ ಒಡೆಯರ್, ಪ್ರೊ. ಸೈಯದ್ ಮತೀನ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

### ಬಿರುಗಾಳಿಗೆ ಮರ, ವಿದ್ಯುತ್ ಕಂಬಗಳು ಧರೆಗೆ; ರಸ್ತೆಯಲ್ಲಿ ಬೃಹತ್ ಕಂದಕ-ಜನರಲ್ಲಿ ಆತಂಕ

# ಧೋ ಎಂದು ಸುರಿದ ಮಳೆ; ತತ್ತರಿಸಿದ ನರೇಗಲ್ಲ






**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಇಷ್ಟು ದಿನಗಳಿಂದ ಮಳೆಗಾಗಿ ಕಾದಿದ್ದ ನರೇಗಲ್ಲ ಹಾಗೂ ಸುತ್ತಮುತ್ತಲಿನ ಜನರಿಗೆ ಸೋಮವಾರ ಸುರಿದ ಮಳೆ ಒಂದೆಡೆ ನೆಮ್ಮದಿ ತಂದರೆ, ಮತ್ತೊಂದೆಡೆ ಮಳೆ–ಗಾಳಿಯ ಅಬ್ಬರ ಆತಂಕ ಮೂಡಿಸಿತು. ಸರಿಸುಮಾರು ನಾಲ್ಕು ಗಂಟೆಗಳ ಕಾಲ ಧೋ ಎಂದು ಸುರಿದ ಭಾರಿ ಮಳೆಯೊಂದಿಗೆ ಬಿರುಗಾಳಿಯೂ ಬೀಸಿದ್ದರಿಂದ ಪಟ್ಟಣದ ಹಲವು ಕಡೆ ಹಾನಿ ಸಂಭವಿಸಿದೆ.

ರವಿವಾರವೇ ಮಳೆಯ ಮುನ್ಸೂಚನೆ ನೀಡಿದ್ದ ಮಳೆರಾಯ, ಸೋಮವಾರ ಅಬ್ಬರಿಸಿದ. ನಿರಂತರ ಮಳೆ ಹಾಗೂ ಬಿರುಗಾಳಿಯಿಂದ ಜನರು ಆತಂಕಗೊಂಡಿದ್ದರು. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.

ಪಟ್ಟಣ ಪಂಚಾಯಿತಿ ಎದುರಿನ ಮರ ಹಾಗೂ ಕೊಂತಿ ಮಲ್ಲಪ್ಪನ ದೇವಸ್ಥಾನದ ಬಳಿಯ ಮರಗಳು ಬಿರುಗಾಳಿಗೆ ಧರೆಗುರುಳಿವೆ. ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ನೀಡಿದ ಮಾಹಿತಿಯ ಮೇರೆಗೆ ಅರಣ್ಯ ಇಲಾಖೆ ಸಿಬ್ಬಂದಿ ಮಂಗಳವಾರ ಮರಗಳನ್ನು ತೆರವುಗೊಳಿಸಿದರು. ಮರಗಳು ರಸ್ತೆ ಮೇಲೆ ಬೀಳದೆ ರಸ್ತೆ ಬದಿಗೆ ಬಿದ್ದಿದ್ದರಿಂದ ಸಂಚಾರಕ್ಕೆ ಹೆಚ್ಚಿನ ತೊಂದರೆಯಾಗಲಿಲ್ಲ.

ಬಿರುಗಾಳಿಯ ರಭಸಕ್ಕೆ ಪಟ್ಟಣ ಪಂಚಾಯಿತಿ ಸಮೀಪ ಮೂರು ವಿದ್ಯುತ್ ಕಂಬಗಳು ಹಾಗೂ ಒಳಕೋಟೆ ಓಣಿಯಲ್ಲಿ ಮೂರು ಕಂಬಗಳು ಮುರಿದು ಬಿದ್ದಿವೆ ಎಂದು ಶಾಖಾಧಿಕಾರಿ ಸರ್ವಿ ತಿಳಿಸಿದ್ದಾರೆ. ಕಂಬಗಳ ದುರಸ್ತಿ ಕಾರ್ಯ ನಡೆಯುತ್ತಿದ್ದು, ದುರಸ್ತಿ ಸಂದರ್ಭದಲ್ಲಿ ವಿದ್ಯುತ್ ವ್ಯತ್ಯಯ ಉಂಟಾದರೆ ಸಾರ್ವಜನಿಕರು ಸಹಕರಿಸಬೇಕು ಎಂದು ಮನವಿ ಮಾಡಿದ್ದಾರೆ.

### ಕಾಮಗಾರಿ ಗುಣಮಟ್ಟಕ್ಕೆ ಸಾರ್ವಜನಿಕರ ಪ್ರಶ್ನೆ

"ಗಟಾರಗಳ ಸಂಪರ್ಕಕ್ಕೆ ಸೂಕ್ತ ವ್ಯವಸ್ಥೆ ಮಾಡದೆ ತಾತ್ಕಾಲಿಕವಾಗಿ ಮುಚ್ಚಿರುವುದರಿಂದ ಮಳೆ ಬಂದಾಗ ರಸ್ತೆ ಕಂದಕವಾಗಿ ಮಾರ್ಪಟ್ಟಿದೆ. ಕಾಮಗಾರಿಯ ಗುಣಮಟ್ಟದ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಪರಿಶೀಲನೆ ನಡೆಸಿ, ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.




ಇದೇ ವೇಳೆ ಕೋಡಿಕೊಪ್ಪದ ಜೋಡು ರಸ್ತೆಯಲ್ಲಿ ಮುತ್ತಣ್ಣ ಪಲ್ಲೇದ ಅವರ ಮನೆಯ ಎದುರು ನಡೆಯುತ್ತಿರುವ ರಸ್ತೆ ದುರಸ್ತಿ ಕಾಮಗಾರಿಯಲ್ಲೂ ಮಳೆಯ ಪರಿಣಾಮ ದೊಡ್ಡ ಕಂದಕ ನಿರ್ಮಾಣವಾಗಿದೆ.

ಎರಡು ಗಟಾರಗಳನ್ನು ಸಂಪರ್ಕಿಸುವ ಅಡ್ಡಗಟಾರಕ್ಕೆ ಸಿಮೆಂಟ್ ಪೈಪ್ ಅಥವಾ ಸಿಡಿ ಅಳವಡಿಸಿ ಮುಚ್ಚುವ ಬದಲು ತಗಡಿನ ಬ್ಯಾರಲ್‌ಗಳಿಂದ ಮುಚ್ಚಿರುವುದು ಕಂಡುಬಂದಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಮಳೆ ಬಂದಾಗ ಕಾಮಗಾರಿಯ ನೈಜ ಗುಣಮಟ್ಟ ಬಯಲಾಗುತ್ತಿದೆ. ಸಾರ್ವಜನಿಕರಿಗೆ ಅನುಕೂಲವಾಗಬೇಕಾದ ಕಾಮಗಾರಿಗಳು ಸಮಸ್ಯೆಗೆ ಕಾರಣವಾಗಬಾರದು.

ಸಂಬಂಧಿಸಿದ ಅಧಿಕಾರಿಗಳು ಸ್ಥಳ ಪರಿಶೀಲಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

### ಗರ್ಭಿಣಿಯರಿಗೆ ಸೀಮಂತ, ಆರು ತಿಂಗಳ ಮಕ್ಕಳಿಗೆ ಅನ್ನಪ್ರಾಶನ

## ಪೋಷಣ್ ಮಾಸಾಚರಣೆಗೆ ಪೌಷ್ಟಿಕತೆಯ ಕಾಳಜಿ



**ವಿಜಯಸಾಕ್ಷಿ ಸುದ್ದಿ, ನರಗುಂದ**

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ನರಗುಂದ ವತಿಯಿಂದ ನಗರದ ಹೊಸೂರು ಓಣಿಯ ನರಗುಂದ–05ನೇ ಅಂಗನವಾಡಿ ಕೇಂದ್ರದಲ್ಲಿ ಪೋಷಣ್ ಮಾಸಾಚರಣೆ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಹಾಗೂ ಆರು ತಿಂಗಳು ಪೂರ್ಣಗೊಳಿಸಿದ ಮಕ್ಕಳಿಗೆ ಅನ್ನಪ್ರಾಶನ ನೆರವೇರಿಸಲಾಯಿತು. ಈ ಮೂಲಕ ತಾಯಿ ಮತ್ತು ಮಗುವಿನ ಆರೋಗ್ಯ ಹಾಗೂ ಪೌಷ್ಟಿಕತೆಯ ಕುರಿತು ಅರಿವು ಮೂಡಿಸಲಾಯಿತು.

ಕಾರ್ಯಕ್ರಮ ಸಂಯೋಜಕ ಮಂಜುನಾಥ ಗುಗ್ಗರಿ ಮಾತನಾಡಿ, ಸಾಂಪ್ರದಾಯಿಕ ಆಹಾರ ಪದ್ಧತಿಗೆ ಆದ್ಯತೆ ನೀಡಬೇಕು. ಕಾಲಕ್ಕೆ ಅನುಗುಣವಾಗಿ ದೊರೆಯುವ ಹಣ್ಣು, ತರಕಾರಿ ಸೇರಿದಂತೆ ಪೌಷ್ಟಿಕ ಆಹಾರವನ್ನು ಸೇವಿಸುವುದರ ಜತೆಗೆ ದೇಹಕ್ಕೆ ಅಗತ್ಯವಾದ ಸಮತೋಲನ ಆಹಾರ ಪಡೆಯುವುದು ಮುಖ್ಯ ಎಂದರು. ಮೇಲ್ವಿಚಾರಕಿ ಶಕುಂತಲಾ ಗಣಿ ಮಾತನಾಡಿ, ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ಆರಂಭದಲ್ಲೇ ಗುರುತಿಸಿ, ಅವರಿಗೆ ಸಮರ್ಪಕ ಪೌಷ್ಟಿಕ ಆಹಾರ ಒದಗಿಸಬೇಕು. ಅಗತ್ಯವಿರುವ ಮಕ್ಕಳನ್ನು ಪೌಷ್ಟಿಕ ಪುನಶ್ಚೇತನ ಕೇಂದ್ರಗಳಿಗೆ ದಾಖಲಿಸಿ ಸೂಕ್ತ ಆರೋಗ್ಯ ಸೇವೆ ಕೊಡಿಸುವ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಮಾಬೂಬಿ ಸುರಕೋಡ, ಮಾಜಿ ಯೋಧ ಬುಡ್ನೇಸಾಬ ಸುರಕೋಡ, ರಾಯೇಸಾಬ ಜಮಾದಾರ, ಅಂಗನವಾಡಿ ಕಾರ್ಯಕರ್ತೆಯರಾದ ರೇಣುಕಾ ಮಾಳದಕರ, ಎಸ್.ಎಂ. ನಾಗನೂರ, ಆರ್.ಎಸ್. ಭಜಂತ್ರಿ, ರೇಣುಕಾ ಮಟಗೇರ, ಸಹಾಯಕಿಯರಾದ ಅಶ್ವಿನಿ ಆರೇರ, ದಿಲಶ್ಯಾದ್ ಜವಳಿ, ಪರಜಾನ್ ನಧಾಫ್ ಸೇರಿದಂತೆ ತಾಯಂದಿರು ಹಾಗೂ ಮಕ್ಕಳು ಪಾಲ್ಗೊಂಡಿದ್ದರು.

> ಅಪೌಷ್ಟಿಕ ಮಕ್ಕಳನ್ನು ಗುರುತಿಸಿ, ಸೂಕ್ತ ಪೌಷ್ಟಿಕ ಆಹಾರ ಹಾಗೂ ಆರೋಗ್ಯ ಸೇವೆ ಒದಗಿಸುವುದು ಪ್ರತಿಯೊಬ್ಬರ ಜವಾಬ್ದಾರಿ. ತಾಯಿ-ಮಗುವಿನ ಆರೋಗ್ಯದ ಬಗ್ಗೆ ಕುಟುಂಬಗಳು ವಿಶೇಷ ಕಾಳಜಿ ವಹಿಸಬೇಕು.
>
> – ಶಕುಂತಲಾ ಗಣಿ, ಮೇಲ್ವಿಚಾರಕಿ

## ಸೆ.26ರ ಗದಗ ಬಂದ್ ಹಿಂಪಡೆದ ರೈತ ಸಂಘಟನೆಗಳು

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ, ರೋಣ ಹಾಗೂ ಮುಂಡರಗಿ ತಾಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ರಾಜ್ಯ ಸರ್ಕಾರ ಘೋಷಿಸಿರುವುದನ್ನು ಸ್ವಾಗತಿಸಿ, ಸೆ.26ರಂದು ಕರೆ ನೀಡಿದ್ದ ಗದಗ ಬಂದ್‌ನ್ನು ರೈತ ಸಂಘಟನೆಗಳು ಹಿಂಪಡೆದಿವೆ. ಜಂಟಿ ಹೇಳಿಕೆಯಲ್ಲಿ ರೈತ ರಕ್ಷಣಾ ಸಮಿತಿ ಅಧ್ಯಕ್ಷ ಪರಮೇಶ್ವರಪ್ಪ ಜಂತ್ಲಿ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ವಿ.ಆರ್. ನಾರಾಯಣರೆಡ್ಡಿ ಬಣ) ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು, ಸರ್ಕಾರ ರೈತರ ಬೇಡಿಕೆಗೆ ಸ್ಪಂದಿಸಿರುವ ಹಿನ್ನೆಲೆಯಲ್ಲಿ ಬಂದ್ ಹಿಂಪಡೆಯುತ್ತಿರುವುದಾಗಿ ತಿಳಿಸಿದ್ದಾರೆ.



ಈ ನಿರ್ಧಾರಕ್ಕೆ ಶ್ರಮಿಸಿದ ಗದಗ ಶಾಸಕ ಎಚ್.ಕೆ. ಪಾಟೀಲ, ಉನ್ನತ ಶಿಕ್ಷಣ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಸವರಾಜ ರಾಯರೆಡ್ಡಿ, ವಿಧಾನ ಪರಿಷತ್ ಸಭಾಪತಿ ಜಿ.ಎಸ್. ಪಾಟೀಲ ಹಾಗೂ ಹೋರಾಟದಲ್ಲಿ ಭಾಗವಹಿಸಿದ ರೈತ ಸಂಘಟನೆಗಳ ಪದಾಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ. ಬರದಿಂದಾದ ಬೆಳೆಹಾನಿಯ ಕುರಿತು ತಕ್ಷಣ ಸಮೀಕ್ಷೆ ನಡೆಸಿ, ಪರಿಹಾರ ಹಾಗೂ ಬೆಳೆ ವಿಮೆಯನ್ನು ಶೀಘ್ರ ಬಿಡುಗಡೆ ಮಾಡಬೇಕು ಎಂದು ರೈತ ಮುಖಂಡರು ಸರ್ಕಾರವನ್ನು ಒತ್ತಾಯಿಸಿದ್ದಾರೆ.

## ರೈತ ಸಂಕಷ್ಟದಲ್ಲಿದ್ದಾನೆ; ಸಾಲ ವಸೂಲಿ ನಿಲ್ಲಿಸಿ




**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಮಳೆ ಕೈಕೊಟ್ಟು ಬೆಳೆ ನಾಶವಾಗಿರುವ ಹಿನ್ನೆಲೆಯಲ್ಲಿ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ಕೃಷಿ ಸಾಲ ಮನ್ನಾ ಮಾಡುವಂತೆ ತಾಲೂಕು ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್‌ನ ವಾರ್ಷಿಕ ಮಹಾಜನ ಸಭೆಯಲ್ಲಿ ಒತ್ತಾಯಿಸಿದರು.

ಪಟ್ಟಣದ ಹಳೆ ಊರಿನ ಸಮುದಾಯ ಭವನದಲ್ಲಿ ಬುಧವಾರ ನಡೆದ ಸಭೆಯ ಅಧ್ಯಕ್ಷತೆಯನ್ನು ಬ್ಯಾಂಕ್ ಅಧ್ಯಕ್ಷ ಬಿ. ಗಂಗಾಧರ ವಹಿಸಿದ್ದರು. ರೈತರ ಬೇಡಿಕೆಗೆ ಸ್ಪಂದಿಸಿದ ಅವರು, ಸಾಲಮನ್ನಾ ಕುರಿತು ರೈತರ ಅಭಿಪ್ರಾಯಗಳನ್ನು ನಿರ್ದೇಶಕರ ಸಭೆಯಲ್ಲಿ ಚರ್ಚಿಸಿ ಮೇಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸುವುದಾಗಿ ತಿಳಿಸಿದರು.

ಬ್ಯಾಂಕ್ ವ್ಯವಸ್ಥಾಪಕ ಶಿವಕವಿ ತಿಪ್ಪೇಸ್ವಾಮಿ 2025–26ನೇ ಸಾಲಿನ ವರದಿ ಮಂಡಿಸಿ, ಪ್ರಸಕ್ತ ಸಾಲಿನಲ್ಲಿ ಶೇ.89.56ರಷ್ಟು ಸಾಲ ವಸೂಲಾತಿ ಸಾಧಿಸಲಾಗಿದೆ. ಸತತ ನಾಲ್ಕು ವರ್ಷಗಳಿಂದ ವಿಜಯನಗರ ಜಿಲ್ಲೆಯಲ್ಲಿ ಸಾಲ ವಸೂಲಾತಿಯಲ್ಲಿ ಬ್ಯಾಂಕ್ ಮೊದಲ ಸ್ಥಾನದಲ್ಲಿದೆ ಎಂದು ತಿಳಿಸಿದರು.

ತಾಲೂಕಿನ 16 ಸಾವಿರ ರೈತ ಕುಟುಂಬಗಳ ಪೈಕಿ 7,002 ರೈತರು ಬ್ಯಾಂಕ್ ಸದಸ್ಯರಾಗಿದ್ದಾರೆ. ಕೃಷಿ ಹಾಗೂ ಕೃಷಿಯೇತರ ಯೋಜನೆಗಳಡಿ ₹1.94 ಕೋಟಿ ಸಾಲ ವಿತರಿಸಲಾಗಿದ್ದು, ₹9.36 ಕೋಟಿ ಸಾಲ ಬಾಕಿಯಿದೆ ಎಂದು ವಿವರಿಸಿದರು.

ರೈತ ಸೊನ್ನದ ತೋಟಪ್ಪ ಮಾತನಾಡಿ, ಐದು ಎಕರೆ ಒಳಗಿನ ಜಮೀನು ಹೊಂದಿರುವ ರೈತರಿಗೆ ಟ್ರ್ಯಾಕ್ಟರ್ ಸಾಲ ನೀಡಬೇಕು ಎಂದು ಒತ್ತಾಯಿಸಿದರು. ಈ ಕುರಿತು ಮೇಲಾಧಿಕಾರಿಗಳಿಗೆ ವರದಿ ಸಲ್ಲಿಸಿ ಕ್ರಮ ಕೈಗೊಳ್ಳುವುದಾಗಿ ಅಧ್ಯಕ್ಷರು ಭರವಸೆ ನೀಡಿದರು.

ಸಭೆಯಲ್ಲಿ ಬ್ಯಾಂಕ್ ಉಪಾಧ್ಯಕ್ಷ ಎ. ಚಂದ್ರಶೇಖರ್, ನಿರ್ದೇಶಕರು, ಮುಖಂಡರು, ಸಿಬ್ಬಂದಿ ಹಾಗೂ ರೈತರು ಪಾಲ್ಗೊಂಡಿದ್ದರು.

# ಗಣೇಶನಿಗೆ ಸಂಭ್ರಮದ ವಿದಾಯ

**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಗಾನಯೋಗಿ ಶ್ರೀ ಪಂ. ಪಂಚಾಕ್ಷರ ಗವಾಯಿಗಳ ಕೃಷಿ ಉತ್ಪನ್ನ ಮಾರುಕಟ್ಟೆ (ಎಪಿಎಂಸಿ) ಪ್ರಾಂಗಣದಲ್ಲಿ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ವತಿಯಿಂದ ಪ್ರತಿಷ್ಠಾಪಿಸಲಾಗಿದ್ದ ಗಣೇಶ ಮೂರ್ತಿಯ ವಿಸರ್ಜನಾ ಮೆರವಣಿಗೆ ಮಂಗಳವಾರ ಸಂಜೆ ವಿಜೃಂಭಣೆಯಿಂದ ನಡೆಯಿತು.

ಮೆರವಣಿಗೆಯಲ್ಲಿ ಮಹಾರಾಷ್ಟ್ರದ ಪುಣೆ ನಗರದ ಪ್ರಸಿದ್ಧ 'ಶಿವಮುದ್ರ' ಢೋಲ್–ತಾಶಾ ತಂಡ ವಿಶೇಷ ಆಕರ್ಷಣೆಯಾಗಿತ್ತು. ನೂರಾರು ಕಲಾವಿದರು ಏಕಕಾಲದಲ್ಲಿ ಬಾರಿಸಿದ ಢೋಲ್–ತಾಶಾ ವಾದ್ಯಗಳ ಭರ್ಜರಿ ನಾದಕ್ಕೆ ಯುವಕರು, ಮಹಿಳೆಯರು, ಭಕ್ತರು ಹಾಗೂ ವ್ಯಾಪಾರಸ್ಥರು ಹೆಜ್ಜೆ ಹಾಕಿದರು. 'ಗಣಪತಿ ಬಪ್ಪ ಮೋರಯಾ' ಘೋಷ ಮೊಳಗುತ್ತಿದ್ದು, ಎಪಿಎಂಸಿ ಪ್ರಾಂಗಣ ಹಬ್ಬದ ವಾತಾವರಣದಲ್ಲಿ ಕಂಗೊಳಿಸಿತು.

ಸಾಂಪ್ರದಾಯಿಕ ಉಡುಗೆಯಲ್ಲಿ ಆಗಮಿಸಿದ್ದ ಶಿವಮುದ್ರ ತಂಡದ ಶಿಸ್ತುಬದ್ಧ ಪ್ರದರ್ಶನ ಹಾಗೂ ವಾದ್ಯಗಳ ಗಂಭೀರ ನಾದ ನೆರೆದಿದ್ದವರ ಗಮನ ಸೆಳೆಯಿತು.

ವಿಸರ್ಜನಾ ಮೆರವಣಿಗೆಗೂ ಮುನ್ನ ಶ್ರೀ ಗಜಾನನೋತ್ಸವ ಟ್ರಸ್ಟ್ ಕಮಿಟಿ ಪದಾಧಿಕಾರಿಗಳು ಹಾಗೂ ಎಪಿಎಂಸಿ ವರ್ತಕರು ಗಣೇಶನಿಗೆ ವಿಶೇಷ ಪೂಜೆ ಮತ್ತು ಮಹಾಮಂಗಳಾರತಿ ನೆರವೇರಿಸಿದರು. ಬಳಿಕ ಆರಂಭಗೊಂಡ ಮೆರವಣಿಗೆಯಲ್ಲಿ ಎಪಿಎಂಸಿ ವರ್ತಕರು, ರೈತರು, ಹಮಾಲಿ ಕಾರ್ಮಿಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡರು.

ವಿವಿಧ ವಾದ್ಯಗಳ ನಾದ, ಭಕ್ತರ ಜಯಘೋಷ ಹಾಗೂ ಸಂಭ್ರಮದ ನಡುವೆ ಸಾಗಿದ ಮೆರವಣಿಗೆ ಅಂತಿಮವಾಗಿ ಭೀಷ್ಮ ಕೆರೆ ತಲುಪಿತು. ಪೂಜಾ ವಿಧಿ–ವಿಧಾನಗಳೊಂದಿಗೆ ಗಣೇಶ ಮೂರ್ತಿಯನ್ನು ವಿಸರ್ಜನೆ ಮಾಡುವ ಮೂಲಕ ಈ ವರ್ಷದ ಗಜಾನನೋತ್ಸವಕ್ಕೆ ಸಂಭ್ರಮದ ತೆರೆ ಎಳೆಯಲಾಯಿತು.



### 15 ದಿನಗಳ ಉದ್ಯೋಗಕೇಂದ್ರಿತ ತರಬೇತಿ ಪೂರ್ಣ

## RPA ಕೌಶಲ್ಯಕ್ಕೆ ವಿದ್ಯಾರ್ಥಿಗಳ 'ಹ್ಯಾಕಥಾನ್' ಸ್ಪರ್ಶ




**ವಿಜಯಸಾಕ್ಷಿ ಸುದ್ದಿ, ಗದಗ**

ಬದಲಾಗುತ್ತಿರುವ ಉದ್ಯೋಗ ಮಾರುಕಟ್ಟೆಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸುವ ನಿಟ್ಟಿನಲ್ಲಿ ನಗರದ ತೋಂಟದಾರ್ಯ ಎಂಜಿನಿಯರಿಂಗ್ ಕಾಲೇಜಿನಲ್ಲಿ ಆಯೋಜಿಸಿದ್ದ ರೋಬೋಟಿಕ್ ಪ್ರೊಸೆಸ್ ಆಟೊಮೇಷನ್ (RPA) ಕುರಿತ 15 ದಿನಗಳ ವಿಶೇಷ ತರಬೇತಿ ಯಶಸ್ವಿಯಾಗಿ ಪೂರ್ಣಗೊಂಡಿದೆ.

ಐಸಿಟಿ ಅಕಾಡೆಮಿ ಹಾಗೂ ಇನ್ಫೋಸಿಸ್ ಫೌಂಡೇಶನ್ ಸಹಯೋಗದಲ್ಲಿ 'ಫಿನಿಶಿಂಗ್ ಸ್ಕೂಲ್ ಫಾರ್ ಎಂಪ್ಲಾಯಬಿಲಿಟಿ–ಫೇಸ್ 3' ಅಡಿಯಲ್ಲಿ ಆಗಸ್ಟ್ 31ರಿಂದ ಸೆಪ್ಟೆಂಬರ್ 17ರವರೆಗೆ ನಡೆದ ತರಬೇತಿಯಲ್ಲಿ ಅಂತಿಮ ವರ್ಷದ ಸುಮಾರು 80 ವಿದ್ಯಾರ್ಥಿಗಳು ಭಾಗವಹಿಸಿದ್ದರು.

ತರಬೇತಿಯಲ್ಲಿ ವಿದ್ಯಾರ್ಥಿಗಳಿಗೆ ಕೇವಲ ಪಠ್ಯಾಧಾರಿತ ಮಾಹಿತಿ ನೀಡದೆ, ಉದ್ಯೋಗ ಕ್ಷೇತ್ರದಲ್ಲಿ ಎದುರಾಗುವ ಸವಾಲುಗಳನ್ನು ನಿಭಾಯಿಸುವ ರೀತಿಯಲ್ಲಿ ತಾಂತ್ರಿಕ ಹಾಗೂ ವೃತ್ತಿಪರ ಕೌಶಲ್ಯಗಳನ್ನು ಪ್ರಾಯೋಗಿಕವಾಗಿ ಕಲಿಸಲಾಯಿತು.

ಮೊದಲ ಮೂರು ದಿನ ಡಾ. ಜ್ಯೋತಿರ್ಪ್ರಕಾಶ ಜಾಲಾ ಅವರು ಸಂವಹನ ಕೌಶಲ್ಯ, ವೃತ್ತಿಪರ ನಡವಳಿಕೆ, ತಂಡದ ಕೆಲಸ ಹಾಗೂ ಉದ್ಯೋಗಕ್ಕೆ ಅಗತ್ಯವಾದ ಕೌಶಲ್ಯಗಳ ಕುರಿತು ತರಬೇತಿ ನೀಡಿದರು.

ನಂತರದ 12 ದಿನ ಶ್ರೀನಾಥ್ ಧವಳಿ ಅವರು UiPath ವೇದಿಕೆಯ ಮೂಲಕ ಖಿಂ ತಂತ್ರಜ್ಞಾನದ ಕುರಿತು ಪ್ರಾಯೋಗಿಕ ತರಬೇತಿ ನೀಡಿದರು.

ತರಬೇತಿಯ ಪ್ರಮುಖ ಆಕರ್ಷಣೆಯಾಗಿ 12 ಗಂಟೆಗಳ ಹ್ಯಾಕಥಾನ್ ಆಯೋಜಿಸಲಾಗಿತ್ತು. ಇದರಲ್ಲಿ ವಿದ್ಯಾರ್ಥಿಗಳು ನೈಜ ಸಮಸ್ಯೆಗಳನ್ನು ಗುರುತಿಸಿ, ತಂತ್ರಜ್ಞಾನ ಬಳಸಿಕೊಂಡು ಪರಿಹಾರ ರೂಪಿಸುವ ಅನುಭವ ಪಡೆದರು. RPA ಪ್ರಕ್ರಿಯೆಗಳ ವಿನ್ಯಾಸ, ಕಾರ್ಯಪ್ರವಾಹಗಳ ಸ್ವಯಂಚಾಲನೆ ಹಾಗೂ ವಿವಿಧ ಪ್ರಾಯೋಗಿಕ ಚಟುವಟಿಕೆಗಳು ತರಬೇತಿಯ ಭಾಗವಾಗಿದ್ದವು.

ಕಾರ್ಯಕ್ರಮದ ಮುಖ್ಯ ಸಂಯೋಜಕರಾಗಿ ಪ್ರೊ. ಸಂತೋಷ್ ಕುಮಾರ್ ಮೇರವಾಡೆ ಕಾರ್ಯನಿರ್ವಹಿಸಿದರು. ಪ್ರೊ. ಪ್ರೇಮ ಯೆಲ್ಲೂರು ಹಾಗೂ ಪ್ರೊ. ವೀಣಾ ಕುರಡಗಿ ವಿದ್ಯಾರ್ಥಿಗಳಿಗೆ ನಿರಂತರ ಮಾರ್ಗದರ್ಶನ ನೀಡಿದರು.

ಕಾಲೇಜಿನ ಪ್ರಾಂಶುಪಾಲ ಡಾ. ಎಂ.ಎಂ. ಅವಟಿ, ಉಪಪ್ರಾಂಶುಪಾಲ ಡಾ. ಜಿ.ಡಿ. ರೇವಣಕರ್, ಕಂಪ್ಯೂಟರ್ ಸೈನ್ಸ್ ಮತ್ತು ಡಿಸೈನ್ ವಿಭಾಗದ ಮುಖ್ಯಸ್ಥ ಡಾ. ವಿಜಯಕುಮಾರ್ ಮಾಲಗಿತ್ತಿ ಹಾಗೂ ತರಬೇತಿ ಮತ್ತು ಉದ್ಯೋಗ ಸಂಯೋಜನಾ ಅಧಿಕಾರಿ ಪ್ರೊ. ನಾಗರಾಜ ಚಾಕಲಬ್ಬಿ ಅವರ ಸಹಕಾರದಿಂದ ತರಬೇತಿ ಯಶಸ್ವಿಯಾಗಿ ನಡೆಯಿತು.

ಉದ್ಯೋಗಕ್ಕೆ ಬೇಕಾದ ತಾಂತ್ರಿಕ ಪರಿಣತಿ ಮತ್ತು ವೃತ್ತಿಪರ ಕೌಶಲ್ಯಗಳನ್ನು ಒಂದೇ ವೇದಿಕೆಯಲ್ಲಿ ಬೆಳೆಸಿದ ತರಬೇತಿ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಪ್ರಾಯೋಗಿಕ ಕಲಿಕೆಯ ಜೊತೆಗೆ ಉದ್ಯೋಗ ಕ್ಷೇತ್ರದ ಸವಾಲುಗಳನ್ನು ಎದುರಿಸುವ ಆತ್ಮವಿಶ್ವಾಸ ಬೆಳೆಸಲು ನೆರವಾಯಿತು.

### ಕಲ್ಲಿನಿಂದ ಮಂದಿರ; ಸಂಸ್ಕಾರದಿಂದ ಸಮಾಜ ನಿರ್ಮಿಸೋಣ

# ಮಂದಿರಗಳು ಮಾನವೀಯ ಮೌಲ್ಯಗಳ ಕೇಂದ್ರಗಳಾಗಲಿ

**ವಿಜಯಸಾಕ್ಷಿ ಸುದ್ದಿ, ದೇವರಹಿಪ್ಪರಗಿ**

ಮಂದಿರದ ಶಿಲಾನ್ಯಾಸವು ಕೇವಲ ಕಟ್ಟಡ ನಿರ್ಮಾಣದ ಆರಂಭವಲ್ಲ. ಧರ್ಮ, ಸಂಸ್ಕಾರ, ಸೇವೆ ಹಾಗೂ ಸೌಹಾರ್ದದ ಹೊಸ ಯುಗಕ್ಕೆ ನಾಂದಿ. ಕಲ್ಲಿನಿಂದ ಮಂದಿರ ನಿರ್ಮಿಸುವುದರ ಜತೆಗೆ ಸಂಸ್ಕಾರದಿಂದ ಸುಭದ್ರ ಸಮಾಜ ನಿರ್ಮಾಣವಾಗಬೇಕು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.

ತಾಲೂಕಿನ ಕೋರವಾರ ಗ್ರಾಮದಲ್ಲಿ ನಡೆದ ಶ್ರೀ ಮಹಾಂತೇಶ್ವರ ಶಿಲಾಮಂಟಪದ ಶಿಲಾನ್ಯಾಸ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಭಾರತೀಯ ಸಂಸ್ಕೃತಿಯಲ್ಲಿ ಮಂದಿರಗಳಿಗೆ ಪವಿತ್ರ ಇತಿಹಾಸವಿದೆ. ಮಂದಿರವೆಂದರೆ ಕೇವಲ ಕಟ್ಟಡವಲ್ಲ, ಭಕ್ತಿ, ಸಂಸ್ಕೃತಿ, ಪರಂಪರೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸುವ ಪವಿತ್ರ ಕೇಂದ್ರ. ಇಂದು ನೆರವೇರಿಸಿದ ಶಿಲಾನ್ಯಾಸ ಧರ್ಮನಿಷ್ಠ ಸಮಾಜ ನಿರ್ಮಾಣದ ಅಡಿಪಾಯವೂ ಆಗಿದೆ ಎಂದರು.

ಪೂಜೆ ಹಾಗೂ ಆಚರಣೆಗಳ ಜತೆಗೆ ದಯೆ, ಸೇವೆ, ಸತ್ಯ, ಪ್ರಾಮಾಣಿಕತೆ ಮತ್ತು ಪರೋಪಕಾರಕ್ಕೆ ಆದ್ಯತೆ ನೀಡಬೇಕು. ಯುವ ಪೀಳಿಗೆಗೆ ನಮ್ಮ ಸಂಸ್ಕೃತಿ, ಪರಂಪರೆ ಹಾಗೂ ನೈತಿಕ ಮೌಲ್ಯಗಳನ್ನು ಪರಿಚಯಿಸುವ ಕೇಂದ್ರಗಳಾಗಿ ಮಂದಿರಗಳು ರೂಪುಗೊಳ್ಳಬೇಕು ಎಂದು ತಿಳಿಸಿದರು.



ಮಠಾಧ್ಯಕ್ಷ ಬಸವಲಿಂಗ ಶಿವಾಚಾರ್ಯರು ತಮ್ಮ ಮೂಲ ಮಠದ ಕಟ್ಟಡ ನಿರ್ಮಾಣ ಕೈಗೊಂಡಿರುವುದು ಭಕ್ತ ಸಮುದಾಯಕ್ಕೆ ಸಂತಸ ತಂದಿದೆ. ಒಂದು ವರ್ಷದೊಳಗೆ ಮಹಾಂತೇಶ್ವರ ಶಿಲಾಮಂಟಪ ಪೂರ್ಣಗೊಂಡು ಮತ್ತೊಮ್ಮೆ ಉದ್ಘಾಟನಾ ಸಮಾರಂಭಕ್ಕೆ ಆಗಮಿಸುವುದಾಗಿ ಜಗದ್ಗುರುಗಳು ಆಶಿಸಿದರು. ಈ ಸಂದರ್ಭದಲ್ಲಿ ಬಸವಲಿಂಗ ಶಿವಾಚಾರ್ಯರಿಗೆ ರೇಷ್ಮೆ ಪೀತಾಂಬರ, ಸ್ಮರಣಿಕೆ ಹಾಗೂ ಫಲಪುಷ್ಪ ನೀಡಿ ಶುಭ ಹಾರೈಸಿದರು.

ಗುಳೇದಗುಡ್ಡದ ಒಪ್ಪತ್ತೇಶ್ವರ ಸ್ವಾಮಿಗಳು ಮಾತನಾಡಿ, ಧಾರ್ಮಿಕ ಪರಂಪರೆ ಕೇವಲ ಆಚರಣೆಗೆ ಸೀಮಿತವಾಗದೆ ಅದರ ಹಿಂದಿರುವ ತತ್ವ ಹಾಗೂ ಜೀವನ ಮೌಲ್ಯಗಳು ಮುಂದಿನ ಪೀಳಿಗೆಗೆ ತಲುಪಬೇಕು. ಅನ್ನದಾನ, ವಿದ್ಯಾದಾನ, ಆರೋಗ್ಯ ಸೇವೆ ಹಾಗೂ ಪರಿಸರ ಸಂರಕ್ಷಣೆಯಂತಹ ಸೇವಾ ಕಾರ್ಯಗಳಿಗೆ ಶಿಲಾಮಂಟಪ ಪ್ರೇರಣಾ ಕೇಂದ್ರವಾಗಲಿ ಎಂದು ಆಶಿಸಿದರು.

ಬಸವಲಿಂಗ ಶಿವಾಚಾರ್ಯರು ಮಾತನಾಡಿ, ಸಕಲ ಜೀವಾತ್ಮರ ಒಳಿತನ್ನು ಬಯಸುವ ಧರ್ಮ ವೀರಶೈವ ಧರ್ಮ. ಮಾನವೀಯ ಮೌಲ್ಯಗಳನ್ನು ಎತ್ತಿಹಿಡಿದಿರುವ ನಮ್ಮ ಸಂಸ್ಕೃತಿ ಮತ್ತು ಸಭ್ಯತೆಯನ್ನು ಮರೆಯಬಾರದು. ಭಕ್ತರ ಸಹಕಾರದಿಂದ ಶಿಲಾಮಂಟಪ ನಿರ್ಮಿಸಿ, ಉದ್ಘಾಟನಾ ಸಮಾರಂಭಕ್ಕೆ ಪಂಚಪೀಠದ ಜಗದ್ಗುರುಗಳನ್ನು ಆಹ್ವಾನಿಸಲಾಗುವುದು ಎಂದರು.

ಮಮದಾಪುರ ಮುರಘೇಂದ್ರ ಸ್ವಾಮಿಗಳು, ದೇವೂರು ಮರುಳಾರಾಧ್ಯ ಬಸವಲಿಂಗ ಶಿವಾಚಾರ್ಯರು, ಅಣಜಿ ಚನ್ನವೀರ ದೇವರು, ಕೆರೂಟಗಿ ಶಿವಬಸವ ಸ್ವಾಮಿಗಳು ಸೇರಿದಂತೆ ವಿವಿಧ ಮಠಾಧೀಶರು ಉಪಸ್ಥಿತರಿದ್ದರು. ಡಾ. ನಿಂಗನಗೌಡ ರಾಜಶೇಖರಗೌಡ ಪಾಟೀಲ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದರು.

ಬ. ನಾಲವಾದಗಿ ಬಸನಗೌಡ ಎಸ್. ಪಾಟೀಲ ಮಹಾಪ್ರಸಾದ ಸೇವೆ ಸಲ್ಲಿಸಿದರು. ಯಶವಂತ ಬಡಿಗೇರ ಭಕ್ತಿಗೀತೆ ಪ್ರಸ್ತುತಪಡಿಸಿದರು. ಜೇರಟಗಿ ಮಡಿವಾಳೇಶ್ವರ ಶಾಸ್ತ್ರಿಗಳು ನಿರೂಪಿಸಿದರು.

### ದಸರಾ ಕ್ರೀಡಾಕೂಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಿ: ಮುಕುಲ್ ಜೈನ್

# ಗೆಲುವಿನ ಲೆಕ್ಕಕ್ಕಿಂತ ಆಟದ ಸ್ಫೂರ್ತಿಯೇ ಮುಖ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಕ್ರೀಡಾಪಟುಗಳು ಕ್ರೀಡಾ ಮನೋಭಾವ ಬೆಳೆಸಿಕೊಂಡು ಉತ್ಸಾಹ ಹಾಗೂ ಕ್ರೀಡಾ ಸ್ಪೂರ್ತಿಯಿಂದ ದಸರಾ ಕ್ರೀಡಾಕೂ ಟದಲ್ಲಿ ಪಾಲ್ಗೊಳ್ಳಬೇಕು ಎಂದು ಜಿಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮುಕುಲ್ ಜೈನ್ ಕರೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಯೋಗದಲ್ಲಿ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಬುಧವಾರ ಆಯೋಜಿಸಿದ್ದ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಕ್ರೀಡಾಕೂಟದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಪಟುಗಳು ಭಾಗವಹಿಸಿ ಗದಗ ಜಿಲ್ಲೆಯ ಕೀರ್ತಿ ಹೆಚ್ಚಿಸಬೇಕು. ಕ್ರೀಡೆಯಲ್ಲಿ ಸೋಲು-ಗೆಲುವಿಗಿಂತ ಕ್ರೀಡಾ ಸ್ಫೂರ್ತಿ ಹಾಗೂ ಹುಮ್ಮಸ್ಸಿನಿಂದ ಪಾಲ್ಗೊಳ್ಳುವುದು ಮುಖ್ಯ ಎಂದು ಮುಕುಲ್ ಜೈನ್ ಹೇಳಿದರು.

ಕ್ರೀಡಾ ಮತ್ತು ಯುವ ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಶರಣು ಗೋಗೇರಿ ಮಾತನಾಡಿ, ಪ್ರತಿ ವರ್ಷ ದಸರಾ ಕ್ರೀಡಾಕೂಟ ಆಯೋಜಿಸಲಾಗುತ್ತಿದ್ದು, ಈ ಬಾರಿ ಜಿಲ್ಲಾ ಮಟ್ಟದ ಸ್ಪರ್ಧೆಗಳು ಸೆ.23 ಮತ್ತು 24ರಂದು ಎರಡು ದಿನಗಳ ಕಾಲ ನಡೆಯಲಿವೆ. ಬೆಂಗಳೂರನ್ನು ಹೊರತುಪಡಿಸಿದರೆ ಗದಗ ಜಿಲ್ಲೆಯಲ್ಲಿ ಉತ್ತಮ ಕ್ರೀಡಾ ಸೌಲಭ್ಯಗಳಿರುವುದು ಸಂತಸದ ಸಂಗತಿ. ಜಿಲ್ಲೆಯ ಕ್ರೀಡಾಪಟುಗಳು ವಿಭಾಗ ಹಾಗೂ ರಾಜ್ಯ ಮಟ್ಟದ ಸ್ಪರ್ಧೆಗಳಲ್ಲಿ ಭಾಗವಹಿಸಿ ಜಿಲ್ಲೆಗೆ ಕೀರ್ತಿ ತರಬೇಕು ಎಂದರು.

> ಕ್ರೀಡೆಯಲ್ಲಿ ಸೋಲು-ಗೆಲುವಿಗಿಂತ ಕ್ರೀಡಾ ಸ್ಫೂರ್ತಿಯಿಂದ ಉತ್ಸಾಹದಿಂದ ಭಾಗವಹಿಸುವುದು ಮುಖ್ಯ. ಹೆಚ್ಚಿನ ಸಂಖ್ಯೆಯಲ್ಲಿ ಕ್ರೀಡಾಪಟುಗಳು ಪಾಲ್ಗೊಂಡು ಜಿಲ್ಲೆಯ ಕೀರ್ತಿ ಹೆಚ್ಚಿಸಬೇಕು.
> – ಮುಕುಲ್ ಜೈನ್

ಕಾರ್ಯಕ್ರಮದಲ್ಲಿ ಜಿಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಯೋಗಗುರು ಕೆ.ಎಸ್. ಪಲ್ಲೇದ, ಗಾಯತ್ರಿ, ಪಿ.ಕೆ. ಅವರಡ್ಡಿ, ಎಂ.ವಿ. ಪಾಟೀಲ, ಎಲ್.ಡಿ. ಪಾಟೀಲ, ವೈ.ಕೆ. ಚೌಡಾಪುರ, ಜಿಲ್ಲಾ ಹಾಗೂ ತಾಲೂಕು ದೈಹಿಕ ಶಿಕ್ಷಣಾಧಿಕಾರಿಗಳು, ಕ್ರೀಡಾ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಕ್ರೀಡಾಪಟುಗಳು ಉಪಸ್ಥಿತ-ರಿದ್ದರು. ವೆಂಕಟೇಶ ಅಲ್ಕೋಡ ರಾಷ್ಟ್ರಗೀತೆ ಹಾಗೂ ನಾಡಗೀತೆ ಪ್ರಸ್ತುತಪಡಿಸಿದರು. ಎಂ.ಎಸ್. ಕುಚಬಾಳ ನಿರೂಪಿಸಿದರು. ಚಂದ್ರಶೇಖರ ಮೇಲಿನಮನಿ ವಂದಿಸಿದರು.

### ಹೆಸರು-ವಿಳಾಸ ವ್ಯತ್ಯಾಸಕ್ಕೆ ದಾಖಲೆಗಳ ಪರಿಶೀಲನೆ

## ಮತದಾರರ ಪಟ್ಟಿಯಲ್ಲಿ ತಪ್ಪುಗಳಿಗೆ ಬ್ರೇಕ್




**ವಿಜಯಸಾಕ್ಷಿ ಸುದ್ದಿ, ಗದಗ**

ಕರಡು ಮತದಾರರ ಪಟ್ಟಿಯಲ್ಲಿ ಕಂಡುಬಂದಿರುವ ವ್ಯತ್ಯಾಸಗಳನ್ನು ಮೂಲ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಿ, ಅರ್ಹ ಮತದಾರರ ಹೆಸರುಗಳನ್ನು ಅಂತಿಮ ಪಟ್ಟಿಯಲ್ಲಿ ಸೇರ್ಪಡೆಗೊಳಿಸುವ ನಿಟ್ಟಿನಲ್ಲಿ ವಿಚಾರಣೆ ಪ್ರಕ್ರಿಯೆ ನಡೆಯಿತು. ಗದಗ ಜಿಲ್ಲೆಯ ವಿಶೇಷ ಸಮಗ್ರ ಪರಿಷ್ಕರಣೆ–2026 ಪ್ರಕ್ರಿಯೆಯಡಿ ಕರಡು ಮತದಾರರ ಪಟ್ಟಿ ಹಾಗೂ ಅದಕ್ಕೆ ಸಂಬಂಧಿಸಿದ ಹಕ್ಕು–ಆಕ್ಷೇಪಣೆಗಳನ್ನು ಪರಿಶೀಲಿಸಲಾಗುತ್ತಿದೆ. ಗದಗ ವಿಧಾನಸಭಾ ಕ್ಷೇತ್ರದ ಮತಗಟ್ಟೆ ಸಂಖ್ಯೆ 54 ಮತ್ತು 55ಕ್ಕೆ ಸಂಬಂಧಿಸಿದ ವಿಚಾರಣೆಯನ್ನು ನಗರದ ಸಿ.ಎಸ್. ಪಾಟೀಲ ಬಾಲಕರ ಪ್ರೌಢಶಾಲೆಯಲ್ಲಿ ನಡೆಸಲಾಯಿತು. ಸಹಾಯಕ ಮತದಾರರ ನೋಂದಣಾಧಿಕಾ–ರಿಗಳ ಸಹಯೋಗದಲ್ಲಿ ನಡೆದ ಪ್ರಕ್ರಿಯೆಯಲ್ಲಿ ಕರಡು ಪಟ್ಟಿಯಲ್ಲಿನ ವ್ಯತ್ಯಾಸಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಪರಿಶೀಲಿಸಲಾಯಿತು. ಮತದಾರರ ಹೆಸರು, ವಿಳಾಸ ಸೇ–ರಿದಂತೆ ಪಟ್ಟಿಯಲ್ಲಿನ ವಿವರಗಳಲ್ಲಿ ಕಂಡುಬಂದಿರುವ ವ್ಯತ್ಯಾಸಗಳ ಕುರಿತು ಮೂಲ ದಾಖಲೆಗಳನ್ನು ಪರಿಶೀಲಿಸಲಾಯಿತು. ದಾಖಲೆಗಳಲ್ಲಿನ ವಿವರ ಹಾಗೂ ಮತದಾರರ ಪಟ್ಟಿಯಲ್ಲಿರುವ ಮಾಹಿತಿ ಯನ್ನು ತಾಳೆ ಹಾಕಿ, ಅರ್ಹತೆ ಹೊಂದಿರುವ ಮತದಾರರ ಹೆಸರು ಗಳನ್ನು ಅಂತಿಮ ಪಟ್ಟಿಯಲ್ಲಿ ಸೇರ್ಪಡೆಗೊಳಿಸುವ ಕುರಿತು ವಿಚಾರಣೆ ನಡೆಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಉಪವಿಭಾಗಾಧಿಕಾರಿ ಗಂಗಪ್ಪ ಎನ್. ಹಾಗೂ ಅಪರ ಜಿಲ್ಲಾಧಿಕಾರಿ ದುರಗೇಶ ಕೆ.ಆರ್. ಅವರು ವಿಚಾರಣೆ ನಡೆಯುತ್ತಿದ್ದ ಸ್ಥಳಕ್ಕೆ ಭೇಟಿ ನೀಡಿ ಪ್ರಕ್ರಿಯೆ ಪರಿಶೀಲಿಸಿದರು. ಗದಗ ಜಿಲ್ಲಾಡಳಿತದ ಅಧಿಕೃತ ಮಾಹಿತಿಯಂತೆ, ವಿಶೇಷ ಸಮಗ್ರ ಪರಿಷ್ಕರಣೆ–2026ಕ್ಕೆ ಸಂಬಂಧಿಸಿದ ಕರಡು ಮತದಾರರ ಪಟ್ಟಿ, ಹಕ್ಕು–ಆಕ್ಷೇಪಣೆಗಳ ವಿವರ ಹಾಗೂ ಇತರ ಪರಿಷ್ಕರಣಾ ಮಾಹಿತಿಗಳನ್ನು ಜಿಲ್ಲಾಡಳಿತದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ.

### ಅರ್ಹರ ಹಕ್ಕು ರಕ್ಷಣೆ; ಅನರ್ಹರಿಗೆ ತಡೆ

ಕರಡು ಪಟ್ಟಿಯಲ್ಲಿನ ವ್ಯತ್ಯಾಸಗಳನ್ನು ಅಂತಿಮ ಪಟ್ಟಿ ಪ್ರಕಟಿಸುವ ಮುನ್ನವೇ ಪರಿಶೀಲಿಸಿ, ಅರ್ಹ ಮತದಾರರಿಗೆ ಮತದಾನದ ಹಕ್ಕು ತಪ್ಪದಂತೆ ಕ್ರಮ ಕೈಗೊಳ್ಳಲಾಗುತ್ತಿದೆ. ಅದೇ ವೇಳೆ ದೋಷಪೂ-ರಿತ ಅಥವಾ ಅನರ್ಹ ದಾಖಲೆಗಳ ಆಧಾರದ ಮೇಲೆ ಹೆಸರು ಸೇರ್ಪಡೆಯಾಗದಂತೆ ದಾಖಲೆಗಳ ಪರಿಶೀಲನೆಗೂ ಆದ್ಯತೆ ನೀಡಲಾಗುತ್ತಿದೆ.

## ಪ್ರತಾಪ್ ಸಿಂಹ ಬಂಧಿಸಿ; ಪ್ರಕರಣಗಳ ತನಿಖೆ ಸಿಐಡಿಗೆ ನೀಡಿ

**ವಿಜಯಸಾಕ್ಷಿ ಸುದ್ದಿ, ಡಂಬಳ**

ನೀಲಿ ಶಾಲು ಹಾಗೂ ದಲಿತ ಸಂಘರ್ಷ ಸಮಿತಿ ಕುರಿತು ಮಾಜಿ ಸಂಸದ ಪ್ರತಾಪ್ ಸಿಂಹ ಅವಹೇಳನಕಾರಿಯಾಗಿ ಮಾತನಾಡಿದ್ದಾರೆ ಎಂದು ಆರೋಪಿಸಿ, ಅವರನ್ನು ಕೂಡಲೇ ಬಂಧಿಸಬೇಕು ಹಾಗೂ ಅವರ ವಿರುದ್ಧ ದಾಖಲಾಗಿರುವ ಎಲ್ಲ ಪ್ರಕರಣಗಳನ್ನು ಸಿಐಡಿ ತನಿಖೆಗೆ ವಹಿಸಬೇಕು ಎಂದು ಕರ್ನಾಟಕ ದಲಿತ ಸಂಘರ್ಷ ಸಮಿತಿ (ಪ್ರೊ. ಬಿ. ಕೃಷ್ಣಪ್ಪ ಸ್ಥಾಪಿತ) ಮುಂಡರಗಿ ತಾಲೂಕು ಸಂಚಾಲಕ ಸೋಮು ಹೈತಾಪುರ ಆಗ್ರಹಿಸಿದರು.



ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಾಪ್ ಸಿಂಹ ವಿರುದ್ಧ ರೌಡಿ ಶೀಟ್ ತೆರೆಯಬೇಕು. ಟಿ. ನರಸೀಪುರದಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ವಿರುದ್ಧ ಆಕ್ಷೇಪಾರ್ಹವಾಗಿ ಮಾತನಾಡಿರುವ ಆರೋಪದ ಹಿನ್ನೆಲೆಯಲ್ಲಿ ಅಟ್ರಾಸಿಟಿ ಪ್ರಕರಣ ದಾಖಲಿಸಬೇಕು ಎಂದು ಒತ್ತಾಯಿಸಿದರು.

ದಲಿತ ಸಂಘರ್ಷ ಸಮಿತಿ ಹಾಗೂ ನೀಲಿ ಶಾಲಿನ ಕುರಿತು ಪ್ರತಾಪ್ ಸಿಂಹ ನೀಡಿರುವ ಹೇಳಿಕೆಗಳು ದಲಿತ ಸಮುದಾಯದ ಭಾವನೆಗಳಿಗೆ ಧಕ್ಕೆ ತರುವಂತಿವೆ ಎಂದು ಸೋಮು ಹೈತಾಪುರ ಆರೋಪಿಸಿದರು.

ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ನೀಲಿ ಶಾಲಿನ ಮಹತ್ವವನ್ನು ಅರಿತು ಮಾತನಾಡಬೇಕು ಎಂದು ಅವರು ಹೇಳಿದರು.

ಟಿ. ನರಸೀಪುರ ಗಣೇಶ ವಿಸರ್ಜನೆ ಸಂದರ್ಭದಲ್ಲಿ ನಡೆದ ಘಟನೆಗೆ ಸಂಬಂಧಿಸಿದಂತೆ ಪ್ರತಾಪ್ ಸಿಂಹ ವಿರುದ್ಧ ಈಗಾಗಲೇ ಎಫ್‌ಐಆರ್ ದಾಖಲಾಗಿದ್ದು, ಪ್ರಕರಣದಲ್ಲಿ ಪೊಲೀಸ್ ಕರ್ತವ್ಯಕ್ಕೆ ಅಡ್ಡಿಪಡಿಸಿದ ಆರೋಪಗಳೂ ದಾಖಲಾಗಿವೆ.

ಈ ಎಲ್ಲ ಪ್ರಕರಣಗಳ ತನಿಖೆಯನ್ನು ಸಿಐಡಿಗೆ ವಹಿಸುವಂತೆ ಸರ್ಕಾರವನ್ನು ಒತ್ತಾಯಿಸಿದ ಸೋಮು ಹೈತಾಪುರ, ವಿಷಯದ ಕುರಿತು ರಾಜ್ಯಾದ್ಯಂತ ಚರ್ಚೆ ನಡೆಸಿ ಮುಂದಿನ ಹೋರಾಟದ ರೂಪುರೇಷೆ ನಿರ್ಧರಿಸಲಾಗುವುದು ಎಂದು ತಿಳಿಸಿದರು.

### ಉದ್ಯೋಗ ಖಾತ್ರಿ ಕಾಮಗಾರಿಯಲ್ಲೇ ಕಾರ್ಮಿಕ ಸಾವು

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಉದ್ಯೋಗ ಖಾತ್ರಿ ಯೋಜನೆಯಡಿ ಕಾಮಗಾರಿ ನಿರ್ವಹಿಸುತ್ತಿದ್ದ ಕಾರ್ಮಿಕರೊಬ್ಬರು ಹೃದಯಾಘಾತದಿಂದ ಮೃತಪಟ್ಟ ಘಟನೆ ತಾಲೂಕಿನ ದಶಮಾಪುರ ಗ್ರಾಮದ ಬಳಿ ಬುಧವಾರ ನಡೆದಿದೆ ಎಂದು ತಿಳಿದು ಬಂದಿದೆ. ದಶಮಾಪುರ ಗ್ರಾಮದ ಶಂಕ್ರಪ್ಪ (58) ಮೃತರು. ಎಂದಿನಂತೆ ಉದ್ಯೋಗ ಖಾತ್ರಿ ಕಾಮಗಾರಿಗೆ ತೆರಳಿದ್ದ ಶಂಕ್ರಪ್ಪ ಅವರಿಗೆ ಕೆಲಸದ ವೇಳೆ ಏಕಾಏಕಿ ಎದೆನೋವು ಕಾಣಿಸಿಕೊಂಡಿದೆ. ಬಳಿಕ ಸ್ಥಳದಲ್ಲೇ ಕುಸಿದುಬಿದ್ದ ಅವರನ್ನು ತಕ್ಷಣ ಆಸ್ಪತ್ರೆಗೆ ಸಾಗಿಸಲಾಯಿತಾದರೂ, ಅಷ್ಟರಲ್ಲಾಗಲೇ ಮೃತಪಟ್ಟಿದ್ದರು ಎಂದು ತಿಳಿದುಬಂದಿದೆ. ಘಟನಾ ಸ್ಥಳಕ್ಕೆ ತಾಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವಿಶ್ವನಾಥ್ ಪಾಲಯ್ಯನಕೋಟೆ, ಸಹಾಯಕ ನಿರ್ದೇಶಕ ರಮೇಶ್ ಮಹಾಲಿಂಗಪುರ, ದಶಮಾಪುರ ಗ್ರಾಪಂ ಪಿಡಿಒ ಮಂಗಳಗೌರಿ, ಇಂಜಿನಿಯರ್‌ಗಳಾದ ವಿಶ್ವನಾಥ್ ಹಾಗೂ ದೇವೇಂದ್ರ ನಾಯ್ಕ ಸೇರಿದಂತೆ ಪಂಚಾಯಿತಿ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದರು.

ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ. ಕಾರ್ಮಿಕನ ಕುಟುಂಬಕ್ಕೆ ಸರ್ಕಾರದ ನಿಯಮಾನುಸಾರ ನ್ಯಾಯಯುತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

## ಕಬ್ಬಡ್ಡಿಯಲ್ಲಿ ಹುಲಕೋಟಿ ಕಾಲೇಜ್ ಪ್ರಥಮ ಸ್ಥಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಗದಗ ತಾಲೂಕು ಪಂಚಾಯತ್ ಜಂಟಿ ಆಶ್ರಯದಲ್ಲಿ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ನಡೆದ 2026–27ನೇ ಸಾಲಿನ ತಾಲೂಕು ಮಟ್ಟದ ದಸರಾ ಕ್ರೀಡಾಕೂಟದ ಕಬ್ಬಡ್ಡಿ ಸ್ಪರ್ಧೆಯಲ್ಲಿ ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿಯರು ಪ್ರಥಮ ಸ್ಥಾನ ಪಡೆದು ಕಾಲೇಜಿಗೆ ಕೀರ್ತಿ ತಂದಿದ್ದಾರೆ.



ಐಶ್ವರ್ಯ ಶಿವಪ್ಪ ಲಮಾಣಿ, ಜ್ಯೋತಿ ಹಿರೇಮನಿ ಹಾಗೂ ಅನಿತಾ ಬೂದಪ್ಪ ಮಂಟೂರ ಅವರು ಅತ್ಯುತ್ತಮ ಕ್ರೀಡಾ ಪ್ರದರ್ಶನ ನೀಡಿ ತಂಡದ ಗೆಲುವಿಗೆ ಕಾರಣರಾದರು. ವಿದ್ಯಾರ್ಥಿನಿಯರ ಸಾಧನೆಯನ್ನು ಗುರುತಿಸಿ ಕಾಲೇಜಿನಲ್ಲಿ ಅಭಿನಂದನಾ ಸಮಾರಂಭ ಆಯೋಜಿಸಲಾಗಿತ್ತು.

ದೈಹಿಕ ಶಿಕ್ಷಣ ಉಪನ್ಯಾಸಕಿ ಡಾ. ಶೋಭಾ ಪಿ. ಅಡಿಕೆ ಪ್ರಾಸ್ತಾವಿಕವಾಗಿ ಮಾತನಾಡಿದರು. ಕ್ರೀಡಾ ವಿಭಾಗದ ಸಂಚಾಲಕ ಮಹಾಂತೇಶ ಮಾತನಾಡಿ, ಕ್ರೀಡೆಗಳು ದೇಹ ಮತ್ತು ಮನಸ್ಸನ್ನು ಸದೃಢವಾಗಿಡುವುದರ ಜೊತೆಗೆ ಶಿಸ್ತು, ಪರಸ್ಪರ ಸಹಕಾರ ಹಾಗೂ ನಾಯಕತ್ವದ ಗುಣಗಳನ್ನು ಬೆಳೆಸುತ್ತವೆ. ವಿದ್ಯಾರ್ಥಿನಿಯರು ಕಬ್ಬಡ್ಡಿ ಪಂದ್ಯಾವಳಿಯಲ್ಲಿ ತೋರಿದ ಸಾಮರ್ಥ್ಯ ಹಾಗೂ ತಾಂತ್ರಿಕ ಆಟ ಶ್ಲಾಘನೀಯ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಅಪ್ಪಣ್ಣ ಎನ್. ಹಂಜೆ ಮಾತನಾಡಿ, ವಿದ್ಯಾಭ್ಯಾಸದ ಜೊತೆಗೆ ಕ್ರೀಡೆಯಲ್ಲೂ ಸಕ್ರಿಯವಾಗಿ ತೊಡಗಿಸಿಕೊಳ್ಳುವುದು ಸರ್ವಾಂಗೀಣ ವ್ಯಕ್ತಿತ್ವ ವಿಕಸನಕ್ಕೆ ಅಗತ್ಯ. ಕಠಿಣ ಶ್ರಮ, ಸತತ ಅಭ್ಯಾಸ ಹಾಗೂ ದೃಢ ಸಂಕಲ್ಪದಿಂದ ಸಾಧನೆ ಸಾಧ್ಯ ಎಂದರು.

ರಮೇಶ ಹುಲಕುಂದ, ಬಸವರಾಜ ಬಳಗಾನೂರಮಠ, ರೋಹಿಣಿ ರಾಚಣ್ಣನವರ, ಸಾವಿತ್ರಿ ಟಿ., ಪವಿತ್ರ ಬಿ.ಸಿ., ಶಂಕ್ರಪ್ಪ ಬಡಿಗೇರ ಸೇರಿದಂತೆ ಕಾಲೇಜಿನ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಉಪಸ್ಥಿತರಿದ್ದು, ವಿಜೇತ ಕ್ರೀಡಾಪಟುಗಳನ್ನು ಅಭಿನಂದಿಸಿದರು.

### 100-110 ಕಾರ್ಮಿಕರ ಅಗತ್ಯ; ಈಗಿರುವುದು ಕೇವಲ 44 ಮಂದಿ

## ಸ್ವಚ್ಛತೆಯ ಸೇನಾನಿಗಳಿಗೆ ಸಿಬ್ಬಂದಿ ಕೊರತೆಯ ಸಂಕಷ್ಟ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸ್ವಚ್ಛತೆ ಹಾಗೂ ಸಾರ್ವಜನಿಕರ ಆರೋಗ್ಯ ರಕ್ಷಣೆಗಾಗಿ ಹಗಲಿರುಳು ಶ್ರಮಿಸುವ ಪೌರ ಕಾರ್ಮಿಕರು ನಿಜವಾದ 'ಸ್ವಚ್ಛತೆಯ ಸೇನಾನಿಗಳು' ಎಂದು ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ ಹೇಳಿದರು. ಪುರಸಭೆ ಸಭಾಭವನದಲ್ಲಿ ಬುಧವಾರ ನಡೆದ ಪೌರ ಕಾರ್ಮಿಕ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಮಳೆ, ಚಳಿ, ಗಾಳಿ ಸೇರಿದಂತೆ ಪ್ರತಿಕೂಲ ಹವಾಮಾನದಲ್ಲಿಯೂ ಕರ್ತವ್ಯ ನಿರ್ವಹಿಸುವ ಪೌರ ಕಾರ್ಮಿಕರು ಸ್ವಚ್ಛ, ಸುಂದರ ಹಾಗೂ ಆರೋಗ್ಯಕರ ಪಟ್ಟಣ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತಿದ್ದಾರೆ ಎಂದರು.



ಪೌರ ಕಾರ್ಮಿಕರನ್ನು ಕೇವಲ ದಿನಾಚರಣೆಯಂದು ಮಾತ್ರ ಗೌರವಿಸುವ ಮನೋಭಾವ ಬದಲಾಗಬೇಕು. ಅವರ ಸೇವೆಯನ್ನು ಪ್ರತಿದಿನ ಗುರುತಿಸಿ ಗೌರವದಿಂದ ಕಾಣಬೇಕು. ನಾಗ–ರಿಕರು ಮನೆ ಹಾಗೂ ವಾಣಿಜ್ಯ ಮಳಿಗೆಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಎಲ್ಲೆಂದರಲ್ಲಿ ಎಸೆಯದೆ ಪೌರ ಕಾರ್ಮಿಕರಿಗೆ ಹಸ್ತಾಂತರಿಸಿ ಸ್ವಚ್ಛತಾ ಕಾರ್ಯಕ್ಕೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಹಿರಿಯ ಆರೋಗ್ಯ ಸಹಾಯಕ ಮಂಜುನಾಥ ಮುದಗಲ್ ಮಾತನಾಡಿ, ಲಕ್ಷ್ಮೇಶ್ವರ ಪಟ್ಟಣದಲ್ಲಿ ಸುಮಾರು 50 ಸಾವಿರ ಜನಸಂಖ್ಯೆ ಇದ್ದು, ಅದಕ್ಕೆ ಅನುಗುಣವಾಗಿ ಕನಿಷ್ಠ 100ರಿಂದ 110 ಪೌರ ಕಾರ್ಮಿಕರ ಅಗತ್ಯವಿದೆ. ಆದರೆ ಪ್ರಸ್ತುತ 19 ಕಾಯಂ ನೌಕರರು ಹಾಗೂ ಗುತ್ತಿಗೆ ಆಧಾರಿತ ಕಾರ್ಮಿಕರು ಸೇರಿ ಕೇವಲ 44 ಮಂದಿ ಮಾತ್ರ ಕಾರ್ಯನಿರ್ವಹಿಸುತ್ತಿದ್ದಾರೆ. ಸಿಬ್ಬಂದಿ ಕೊರತೆಯ ನಡುವೆಯೂ ಕಾರ್ಮಿಕರು ಪ್ರಾಮಾಣಿಕವಾಗಿ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದರು.

ಪುರಸಭೆ ಪೌರ ಕಾರ್ಮಿಕರ ಸಂಘದ ಮಾಜಿ ಅಧ್ಯಕ್ಷ ಬಸವಣ್ಣೆಪ್ಪ ನಂದೆಣ್ಣವರ ಹಾಗೂ ಕಂದಾಯ ಅಧಿಕಾರಿ ಸುರೇಶ ಪೂಜಾರ ಮಾತನಾಡಿ, ಸ್ವಚ್ಛ ಪಟ್ಟಣ ನಿರ್ಮಾಣದಲ್ಲಿ ಪೌರ ಕಾರ್ಮಿಕರ ಪಾತ್ರ ಮಹತ್ವದ್ದಾಗಿದೆ. ಈ ಹಿಂದೆ ಕೆಲವರ ಸೇವೆ ಕಾಯಂಗೊಂಡಿದ್ದು, ಉಳಿದ ಅರ್ಹ ಕಾರ್ಮಿಕರ ಸೇವೆಯನ್ನೂ ಕಾಯಂಗೊಳಿಸಲು ಸರ್ಕಾರ ಅವಕಾಶ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮದಲ್ಲಿ ಪೌರ ಕಾರ್ಮಿಕರನ್ನು ಸನ್ಮಾನಿಸಿ, ಸರ್ಕಾರದಿಂದ ದೊರೆತ ವಿಶೇಷ ಪ್ರೋತ್ಸಾಹಧನದ ಚೆಕ್‌ಗಳನ್ನು ವಿತರಿಸಲಾಯಿತು. ಕಾರ್ಮಿಕರ ಆರೋಗ್ಯ ತಪಾಸಣೆ ಸೇರಿದಂತೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ವ್ಯವಸ್ಥಾಪಕಿ ಮಂಜುಳಾ ಹೂಗಾರ, ಸಮುದಾಯ ಸಂಘಟನಾ ಅಧಿಕಾರಿ ಶೈಲಜಾ ಪಾಟೀಲ, ಪತ್ರಕರ್ತರ ಸಂಘದ ತಾಲೂಕಾಧ್ಯಕ್ಷ ಅಶೋಕ ಸೊರಟೂರ, ಗೋಣೆಪ್ಪ ಗಡದವರ, ದೇವಣ್ಣ ನಂದೆಣ್ಣವರ, ನೇತ್ರಾ ಹೊಸಮನಿ, ಎಸ್.ಪಿ. ನಿಂಬಯ್ಯನಮಠ, ಮಹೇಶ ಹೊಸಮನಿ ಸೇರಿದಂತೆ ಪುರಸಭೆ ಸಿಬ್ಬಂದಿ ಹಾಗೂ ಪೌರ ಕಾರ್ಮಿಕರು ಉಪಸ್ಥಿತರಿದ್ದರು. ಹನುಮಂತ ನಂದೆಣ್ಣವರ ನಿರೂಪಿಸಿದರು.

## ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಈಗಿನಿಂದಲೇ ಸಜ್ಜಾಗಿ: ಡಾ. ಗಣಪತಿ ಲಮಾಣಿ

**ವಿಜಯಸಾಕ್ಷಿ ಸುದ್ದಿ, ಕೊಪ್ಪಳ**

ಇದು ಸ್ಪರ್ಧಾತ್ಮಕ ಯುಗವಾಗಿದ್ದು, ಎಲ್ಲ ಕ್ಷೇತ್ರಗಳಲ್ಲೂ ಪೈಪೋಟಿ ಹೆಚ್ಚುತ್ತಿದೆ. ವಿದ್ಯಾರ್ಥಿಗಳು ಕಲಿಕಾ ಹಂತದಲ್ಲಿಯೇ ಸ್ಪರ್ಧಾತ್ಮಕ ಮನೋಭಾವ ಬೆಳೆಸಿಕೊಂಡು ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಮಹಿಳೆಯರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಲಮಾಣಿ ಕರೆ ನೀಡಿದರು. ಕಾಲೇಜಿನಲ್ಲಿ ಆಂತ–ರಿಕ ಗುಣಮಟ್ಟ ಭರವಸಾ ಕೋಶ (ಐಕ್ಯುಎಸಿ) ಹಾಗೂ ಪ್ಲೇಸ್‌ಮೆಂಟ್ ವಿಭಾಗದ ಸಹಯೋಗದಲ್ಲಿ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಕು–ರಿತು ಆಯೋಜಿಸಿರುವ ಮೂರು ದಿನಗಳ 'ಯಶಸ್ಸಿನತ್ತ ಒಂದು ಹೆಜ್ಜೆ' ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಸರ್ಕಾರಿ ಕಾಲೇಜುಗಳ ವಿದ್ಯಾರ್ಥಿಗಳನ್ನು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಜ್ಜುಗೊಳಿಸಲು ಸರ್ಕಾರ ಹಲವು ಕಾರ್ಯಕ್ರಮಗಳನ್ನು ರೂಪಿಸಿದೆ. ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಕಾರ್ಯಾಗಾರದ ಬಳಿಕ ಶರಣಯ್ಯ ಅಬ್ಬಿಗೇರಿಮಠ ಸಾಮಾನ್ಯ ಜ್ಞಾನ ಹಾಗೂ ನಿರುಪಾದಿ ಕುರ್ನಾಳ ಅವರು ಅರ್ಥಶಾಸ್ತ್ರ ವಿಷಯಗಳ ಕುರಿತು ವಿದ್ಯಾರ್ಥಿಗಳಿಗೆ ಉಪನ್ಯಾಸ ನೀಡಿದರು.

### ಸರ್ಕಾರಿ ಶಾಲೆಗೆ ಕಂಪ್ಯೂಟರ್ ಕೊಡುಗೆ

## ಶಿಕ್ಷಕರ ಸಮರ್ಪಣೆಯೇ ಮಕ್ಕಳ ಕನಸಿಗೆ ರೆಕ್ಕೆ

**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ಶಾಲೆಗಳ ಶಕ್ತಿ ಕಟ್ಟಡದಲ್ಲಲ್ಲ, ಶಿಕ್ಷಕರ ಸಮರ್ಪಣೆ, ಮಕ್ಕಳ ಪ್ರತಿಭೆ ಹಾಗೂ ಸಮುದಾಯದ ಸಹಕಾರದಲ್ಲಿದೆ ಎಂದು ಗದಗ ಜಯೇಂಟ್ಸ್ ಗ್ರುಪ್ ಆಫ್ ಸಖೀ ಸಹೇಲಿ ಅಧ್ಯಕ್ಷೆ ಹೇಮಾ ಪೊಂಗಾಲಿಯಾ ಹೇಳಿದರು. ನಗರದ ಸರ್ಕಾರಿ ಪ್ರಾಥಮಿಕ ಶಾಲೆ ನಂ.16ಕ್ಕೆ ಗದಗ ಜಯೇಂಟ್ಸ್ ಗ್ರುಪ್ ಆಫ್ ಸಖೀ ಸಹೇಲಿ ಹಾಗೂ ಲಯನ್ಸ್ ಕ್ಲಬ್ ಗದಗ ಶಹರ ವತಿಯಿಂದ ನೀಡಲಾದ ಆಧುನಿಕ ಕಂಪ್ಯೂಟರ್ ವಿತರಿಸಿ ಅವರು ಮಾತನಾಡಿದರು.




### ತಂತ್ರಜ್ಞಾನ ಕಲಿಕೆಗೆ ಹೊಸ ಹೆಜ್ಜೆ

ಸರ್ಕಾರಿ ಶಾಲಾ ಮಕ್ಕಳ ಶೈಕ್ಷಣಿಕ ಬೆಳವಣಿಗೆಗೆ ಸಮುದಾಯದ ಸಹಕಾರ ಪೂರಕವಾಗಿದ್ದು, ಕಂಪ್ಯೂಟ-ರ್ ಸೌಲಭ್ಯವನ್ನು ಸದುಪಯೋಗಪಡಿಸಿಕೊಂಡು ಮಕ್ಕಳು ತಂತ್ರಜ್ಞಾನ ಕ್ಷೇತ್ರದಲ್ಲಿ ಮುನ್ನಡೆಯಲಿ.

ಸರ್ಕಾರಿ ಶಾಲಾ ಮಕ್ಕಳು ಪ್ರತಿಭಾವಂತರಾಗಿದ್ದು, ಅವರ ಕಲಿಕೆಗೆ ಅಗತ್ಯ ಸೌಲಭ್ಯ ಕಲ್ಪಿಸುವುದು ಸಮುದಾಯದ ಜವಾಬ್ದಾ–ರಿಯಾಗಿದೆ. ಬಡ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಕಂಪ್ಯೂಟರ್ ಸಹಕಾ–ರಿಯಾಗಲಿ ಎಂದು ಆಶಿಸಿದರು.

ದಾನಿ ನಿರ್ಮಲಾ ಪಾಟೀಲ ಮಾತನಾಡಿ, ಸರ್ಕಾರಿ ಶಾಲೆಗಳು ಮಕ್ಕಳಿಗೆ ಕಲಿಕೆಯ ಜೊತೆಗೆ ಬದುಕಿನ ಪಾಠವನ್ನೂ ಕಲಿಸುವ ಕೇಂದ್ರಗಳಾಗಿವೆ ಎಂದರು.

ಇನ್ನೋರ್ವ ದಾನಿ ಸುಗ್ಗಲಾ ಯಳಮಲಿ ಮಾತನಾಡಿ, ತಂತ್ರಜ್ಞಾನ ಯುಗದಲ್ಲಿ ಕಂಪ್ಯೂಟರ್ ಜ್ಞಾನ ಮಕ್ಕಳಿಗೆ ಅಗತ್ಯವಾಗಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು. ಆರ್ಗನೈಸರ್ ಆಫಿಸರ್ ಹಾಗೂ ಫಾರ್ಮರ್ ಪ್ರೆಸಿಡೆಂಟ್ ಸುಮಾ ಪಾಟೀಲ ಮಾತನಾಡಿ, ಸರ್ಕಾರಿ ಶಾಲಾ ಮಕ್ಕಳು ಆಧುನಿಕ ಶಿಕ್ಷಣದಲ್ಲಿ ಮುನ್ನಡೆಯಬೇಕು ಎಂಬ ಉದ್ದೇಶದಿಂದ ಕಂಪ್ಯೂಟರ್ ಕೊಡುಗೆ ನೀಡಲಾಗಿದೆ ಎಂದರು.

ಸಂಪನ್ಮೂಲ ವ್ಯಕ್ತಿ ಕವಿತಾ ದಂಡಿನ ಸ್ವಾಗತಿಸಿದರು. ಮುಖ್ಯೋಪಾಧ್ಯಾಯ ಎಸ್.ಟಿ. ಕುಲಕರ್ಣಿ, ಹಿರಿಯ ಶಿಕ್ಷಕಿ ಶ್ರೀಮತಿ ನಮಾಜಿ ವೇದಿಕೆಯಲ್ಲಿದ್ದರು. ಗದಗ ಜಯೇಂಟ್ಸ್ ಗ್ರುಪ್ ಆಫ್ ಸಖೀ ಸಹೇಲಿ ಕಾರ್ಯದರ್ಶಿ ಚಂದ್ರಕಲಾ ಸ್ಥಾವರಮಠ, ನಿರ್ದೇಶಕಿ ರೇಖಾ ರೊಟ್ಟಿ, ಸದಸ್ಯರಾದ ರೇಣುಕಾ ಬಣಕಾರ, ಪದ್ಮಿನಿ ಮಾಟಲದಿನ್ನಿ, ಯೋಗೇಶ ಹೊಸಮಠ ಉಪಸ್ಥಿತರಿದ್ದರು.

## 'ಟಿವಿ ಶೀವಿ' ಪತ್ರಿಕೆ ಪುನರಾರಂಭ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕರ್ನಾಟಕ ಟೆಲಿವಿಷನ್ ಅಸೋಸಿಯೇಷನ್ (ರಿ.)ನ ಆಂತ–ರಿಕ ಪ್ರಸಾರದ ದ್ವೈಮಾಸಿಕ ಪತ್ರಿಕೆ 'ಟಿವಿ ಶೀವಿ' ಪುನರಾರಂಭಗೊಂಡಿದೆ. ಬಿಬಿಎಂಪಿ ವಿರೋಧ ಪಕ್ಷದ ಮಾಜಿ ನಾಯಕ ಎನ್.ಆರ್. ರಮೇಶ್ ಅವರು ಪತ್ರಿಕೆಯನ್ನು ಪುನರಾರಂಭಗೊಳಿಸಿದರು.




ಕಾರ್ಯಕ್ರಮದಲ್ಲಿ ಪತ್ರಿಕೆಯ ಸಂಪಾದಕ ಹಿರಿಯೂರು ರಾಘವೇಂದ್ರ, ಕೆಟಿವಿಎ ಅಧ್ಯಕ್ಷ ಗಣೇಶ್ ರಾವ್ ಕೇಸರ್ಕರ್, ಚಲನಚಿತ್ರ ಕಲಾವಿದ ಶ್ರೀನಗರ ಕಿಟ್ಟಿ, ಗೌರವಾಧ್ಯಕ್ಷೆ ಪದ್ಮಾ ವಾಸಂತಿ, ಕಾರ್ಯದರ್ಶಿ ಬೆಳ್ಳಿಚುಕ್ಕಿ ವೀರೇಂದ್ರ, ರೇಣು ಶಿಕಾರಿ ಎನ್.ಟಿ. ರಾಮಸ್ವಾಮಿ, ಡಾ. ಎ.ಆರ್. ಗೋವಿಂದಸ್ವಾಮಿ ಉಪಸ್ಥಿತರಿದ್ದರು.

ಪತ್ರಿಕೆ ಬಿಡುಗಡೆ ಮಾಡಿ ಮಾತನಾಡಿದ ಎನ್.ಆರ್. ರಮೇಶ್, ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡಿ. ಟೆಲಿವಿಷನ್ ಕಲ್ಚರಲ್ ಅಂಡ್ ಸ್ಪೋರ್ಟ್ಸ್ ಕ್ಲಬ್ (ರಿ.) ಹಾಗೂ ಕರ್ನಾಟಕ ಟೆಲಿವಿಷನ್ ಅಸೋಸಿಯೇಷನ್ (ರಿ.) ಎರಡೂ ಸಂಸ್ಥೆಗಳು ಒಂದಾಗಿ ಕೆಲಸ ಮಾಡಿದರೆ ಏನು ಬೇಕಾದರೂ ಸಾಧಿಸಬಹುದು ಎಂದು ಹೇಳಿದರು.

'ಟಿವಿ ಶೀವಿ' ಪುನರಾರಂಭಗೊಂಡಿರುವುದಕ್ಕೆ ಕೆಟಿವಿಎ ಪದಾಧಿಕಾರಿಗಳು, ಚಲನಚಿತ್ರ ನಿರ್ದೇಶಕರು, ಕಲಾವಿದರು ಹಾಗೂ ಸಾಹಿತಿಗಳು ಸಂತಸ ವ್ಯಕ್ತಪಡಿಸಿ, ಪತ್ರಿಕೆಯ ಯಶಸ್ಸಿಗೆ ಶುಭ ಹಾರೈಸಿದ್ದಾರೆ.

ಕಲಾಪೋಷಕರ ಮಠ ಸಿದ್ದನಕೊಳ್ಳದ ಡಾ. ಶಿವಕುಮಾರ ಮಹಾಸ್ವಾಮಿಗಳು, ಹಿರಿಯ ಚಲನಚಿತ್ರ ಪತ್ರಕರ್ತರಾದ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ, ನಿರ್ದೇಶಕ–ನಿರ್ಮಾಪಕರಾದ ಲೋಕೇಶ ವಿದ್ಯಾಧರ, ಅರವಿಂದ ಮುಳಗುಂದ, ರೇಣುಕುಮಾರ ಸಂಸ್ಥಾನಮಠ, ಪತ್ರಿಕಾ ಸಂಪಾದಕರಾದ ಗಣಪತಿ ಗಂಗೊಳ್ಳಿ, ಲಕ್ಷ್ಮಣ ಬಾರಕೇರ, ಅಶೋಕ ತೋಟದ, ಕಲಾವಿದರಾದ ವೀರೇಶ ಪುರವಂತರ, ಸಂಗನಗೌಡ ಕುರುಡಗಿ, ರವೀಂದ್ರ ರಾಮದುರ್ಗಕರ, ವೀರಣ್ಣ ವಿಠಲಾಪೂರ, ಛಾಯಾಗ್ರಾಹಕ ಶರಣು ಸುಗ್ನಳ್ಳಿ, ಅಭಿ ಕ್ರಿಯೇಷನ್ಸ್‌ನ ನಿರ್ಮಾಪಕಿ ವಿದ್ಯಾ ಗಂಜಿಹಾಳ, ಸಂಗೀತಾ ಚಂದ್ರಶೇಖರ ಆಡಿನ, ರೇಖಾ ಸಿದ್ದುಕೃಷ್ಣ ಢೇಕಣಿ ಸೇರಿದಂತೆ ಹಲವರು ಶುಭ ಹಾರೈಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka